MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 277 | ಬುಧವಾರ : 20-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 277 | WEDNESDAY : 20-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮಾದಕ ವಸ್ತು ನಿರ್ಮೂಲನೆಗೆ ಸಾರ್ವಜನಿಕರು ಪೊಲೀಸರೊಂದಿಗೆ ಕೈಜೋಡಿಸಿ

**ಬೆಂಗಳೂರು,ಆ.19–**ಮಾದಕ ವಸ್ತು ಮಾರಾಟ ಅಥವಾ ಸಾಗಾಟ ಮಾಡುತ್ತಿರುವುದು ಎಲ್ಲೆ ಕಂಡು ಬಂದರೂ ತಕ್ಷಣ ಪೊಲೀಸರಿಗೆ ಮಾಹಿತಿ ನೀಡುವಂತೆ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ರವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ನಗರ ಪೊಲೀಸರು ವಶಪಡಿಸಿಕೊಂಡಿರುವ ಸುಮಾರು 5.5 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳ ಬಗ್ಗೆ ಅವರು ಮಾಹಿತಿ ನೀಡಿ, ಈಗ ವಶಪಡಿಸಿಕೊಂಡಿರುವ ಮಾದಕ ವಸ್ತುಗಳು ಎಲ್ಲಿಂದ ರವಾನೆಯಾಗಿವೆ, ಯಾರ್ಯಾರಿಗೆ ಸಾಗಾಟ ಮಾಡಲಾಗಿದೆ ಎಂಬುವುದನ್ನು ಪತ್ತೆ ಹಚ್ಚಲು ಅಧಿಕಾರಿಗಳಿಗೆ ತಿಳಿಸಲಾಗಿದ್ದು, ಆ ನಿಟ್ಟಿನಲ್ಲಿ ಕಾರ್ಯಾಚರಣೆ ಮುಂದುವರೆದಿದೆ ಎಂದರು.

ಶಾಲಾ, ಕಾಲೇಜು ಅಥವಾ ಯಾವುದೇ ಸಂಸ್ಥೆಗಳಲ್ಲಿ ಹಾಗೂ ಇನ್ನಿತರ ಸ್ಥಳಗಳಲ್ಲಿ ಮಾದಕ ವಸ್ತು ಮಾರಾಟ ಮಾಡುತ್ತಿರುವುದು ಕಂಡು ಬಂದರೆ ತಕ್ಷಣ ಸಾರ್ವಜನಿಕರು ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು, ಮಾಹಿತಿ ನೀಡುವವರ ಹೆಸರು ಹಾಗೂ ವಿಳಾಸವನ್ನು ಗೌಪ್ಯವಾಗಿಡುವ ಜೊತೆಗೆ ಅವರಿಗೆ ರಕ್ಷಣೆ ನೀಡುತ್ತೇವೆಂದು ಆಯುಕ್ತರು ಭರವಸೆ ನೀಡಿದರು.



ಮಾದಕ ವಸ್ತು ಹಾವಳಿಯಿಂದ ಸಮಾಜಕ್ಕೆ ಕೆಟ್ಟ ಹೆಸರು ಬರುತ್ತದೆ. ಮಾದಕ ವಸ್ತು ನಿರ್ಮೂಲನೆಗೆ ಈಗಾಗಲೇ ನಾವು ಪಣತೊಟ್ಟಿದ್ದೇವೆ. ನಮ ಜೊತೆ ಸಾರ್ವಜನಿಕರು ಕೈ ಜೋಡಿಸಿದರೆ ಮಾದಕ ವಸ್ತು ಮಾರಾಟ ಹಾಗೂ ಸಾಗಾಟವನ್ನು ತಡೆಗಟ್ಟಬಹುದು. ಹಾಗಾಗಿ ದಯಮಾಡಿ ಸಾರ್ವಜನಿಕರು ತಮ ಸುತ್ತಮುತ್ತಲಿನಲ್ಲಿ ಮಾದಕ ವಸ್ತುವಿನ ಬಗ್ಗೆ ಮಾಹಿತಿ ಇದ್ದಲ್ಲಿ ಕೂಡಲೇ ತಿಳಿಸುವಂತೆ ಸೀಮಂತ್‌ಕುಮಾರ್ ಸಿಂಗ್ ಅವರು ಮನವಿ ಮಾಡಿದ್ದಾರೆ.

## ಗಣೇಶೋತ್ಸವ: ಸರ್ಕಾರ ಹೊರಡಿಸಿದ ಮಾರ್ಗಸೂಚಿ ಅಂಶಗಳ ಪಾಲನೆಗೆ ಜಿಲ್ಲಾಡಳಿತದಿಂದ ಕಟ್ಟುನಿಟ್ಟಿನ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.19–** ನಗರ, ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಗೌರಿ–ಗಣೇಶ ಹಬ್ಬದ ಸಮಯದಲ್ಲಿ ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ ಕುರಿತು ಸರ್ಕಾರ ಹೊರಡಿಸಿದ ಮಾರ್ಗ ಸೂಚಿ ಅಂಶಗಳನ್ನು ಪಾಲನೆ ಮಾಡುವಂತೆ ಜಿಲ್ಲಾಡಳಿತವು ಕಟ್ಟುನಿಟ್ಟಿನ ಸೂಚನೆ ನೀಡಿದೆ.



ಸಾರ್ವಜನಿಕರು ಸಾಧ್ಯವಾದಷ್ಟು ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ (ಪಿ.ಓ.ಪಿ) ಅಥವಾ ಲೋಹ ಮಿಶ್ರಿತ ಬಣ್ಣ ಲೇಪಿತದಂತಹ ಮೂರ್ತಿಗಳ ಬದಲಿಗೆ ನೈಸರ್ಗಿಕ ಬಣ್ಣಗಳಿಂದ ತಯಾರಿಸಿರುವ ಮಣ್ಣಿನ ಚಿಕ್ಕ ಮೂರ್ತಿಗಳನ್ನು ಖರೀದಿಸಲು ನಿರ್ದೇಶಿಸಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳ ಸ್ಥಾಪನೆಗೆ ಸಂಬಂಧಪಟ್ಟಂತೆ ಗಣೇಶ ಮಂಡಳಿಯವರು ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಯಿಂದ ಅಗತ್ಯ ಪರವಾನಿಗೆ ಪಡೆಯುವ ಮೂಲಕ ಷರತ್ತು ಮತ್ತು ನಿಬಂಧನೆಗಳನ್ನು ಪಾಲನೆ ಮಾಡಬೇಕು.

ಹೊರ ರಾಜ್ಯದಿಂದ ತರುವ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ಲೋಹ ಮಿಶ್ರಿತ ಬಣ್ಣ ಲೇಪಿತದಂತಹ ವಿಗ್ರಹಗಳನ್ನು ತಡೆಯುವ ಮತ್ತು ವಾಪಸ್ಸು ಕಳುಹಿಸುವ ಜವಾಬ್ದಾರಿಯನ್ನು ರಾಜ್ಯ ಅಥವಾ ಜಿಲ್ಲಾಗಡಿ ಭಾಗದ ಠಾಣೆ ಅಥವಾ ಚೆಕ್ ಪೋಸ್ಟನ ಅಧಿಕಾರಿಗಳಿಗೆ ನೀಡಲಾಗಿದೆ. ಜಿಲ್ಲೆಯ ವಾಣಿಜ್ಯ ತೆರಿಗೆ ಹಾಗೂ ಸಾರಿಗೆ ಇಲಾಖೆ ಅಥವಾ ಪೊಲೀಸ್ ಇಲಾಖೆಗಳು ಕಟ್ಟುನಿಟ್ಟಿನ ಕ್ರಮವಹಿಸಬೇಕು.

ಸ್ಥಳೀಯ ಸಂಸ್ಥೆಗಳು ಪ್ಲಾಸ್ಟರ್ ಆಫ್ ಪ್ಯಾರಿಸನಿಂದ ಅಥವಾ ಲೋಹ ಮಿಶ್ರಿತ ಬಣ್ಣ ಲೇಪಿತ ವಿಗ್ರಹಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿಗಳಿಗೆ ಅತವಾ ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸನ್ನು ನೀಡದಿರಲು ಹಾಗೂ ಯಾವುದೇ ಲೈಸನ್ಸನ್ನು ಪಡೆಯದೆ ಅನಧೀಕೃತವಾಗಿ ತಯಾರಿ ಅಥವಾ ಮಾರಾಟ ಮಾಡುತ್ತಿರುವ ವ್ಯಕ್ತಿ ಅಥವಾ ಸಂಸ್ಥೆಗಳ ಮೇಲೆ ತಕ್ಷಣ ಕಾನೂನು ರೀತಿ ಕ್ರಮ ಜರುಗಿಸಬೇಕು. ಹಬ್ಬದ ಸಂದ ರ್ಭದಲ್ಲಿ ಪ್ಲಾಸ್ಟಿಕ್ ರಹಿತ ವಸ್ತುಗಳ ಬದಲಿಗೆ ಹೂವು ಪತ್ರೆಗಳಿಂದ ಅಲಂಕರಿಸಿ ಮೂರ್ತಿ ಪೂಜಿಸಬೇಕು.

ಗಣೇಶನ ವಿಗ್ರಹಗಳನ್ನು ಸ್ಥಳೀಯ ಸಂಸ್ಥೆಗಳು (ಮುನ್ಸಿಪಾಲಿಟಿಗಳು) ಗೊತ್ತುಪಡಿಸಿದ *2ನೇ ಪುಟಕ್ಕೆ*

## ಶಾಸಕರು ಅಭಿವೃದ್ಧಿ ಕಡೆ ಗಮನ ಹರಿಸಲಿ : ವೆಂಕಟೇಶ ಗುತ್ತೇದಾರ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.19–** ಶಾಸಕ ಮಾನಪ್ಪ ವಜ್ಜಲ್ ಸಾರ್ವಜನಿಕ ಭಾಷಣಗಳಲ್ಲಿ ಸರಕಾರದ ವಿರುದ್ಧ ಟೀಕೆ ಮಾಡುವುದನ್ನು ನಿಲ್ಲಿಸಿ. ಕ್ಷೇತ್ರದ ಅಭಿವೃದ್ಧಿಗೆ ಬಂದಿರುವ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಲು ಮುಂದಾಗಲಿ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವೆಂಕಟೇಶ ಗುತ್ತೇದಾರ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು, "ಸ್ವಾತಂತ್ರ್ಯ ದಿನೋತ್ಸವದಂದು ಶಾಸಕ ಮಾನಪ್ಪ ವಜ್ಜಲ್‌ರು ಸರಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಹಗುರವಾಗಿ ಮಾತನಾಡಿರುವುದು ಸರಿಯಲ್ಲ. ರಾಜ್ಯ ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಎಲ್ಲಾ ಸಮುದಾಯದ ಬಡವರು, ನಿರ್ಗತಿಕರಿಗೆ ನೇರವಾಗಿ ತಲುಪುತ್ತಿವೆ. ಕ್ಷೇತ್ರದ ಅಭಿವೃದ್ಧಿಗೆ ಕೋಟಿಗಟ್ಟಲೇ ಅನುದಾನವನ್ನು ಸರಕಾರ ನೀಡಿದ್ದು, ಶಾಸಕರು ಅದನ್ನು ಸದುಪಯೋಗ ಪಡಿಸಿಕೊಳ್ಳುವಲ್ಲಿ ವಿಫಲರಾಗಿದ್ದಾರೆ. ಇಚ್ಛಾಶಕ್ತಿ ಕೊರತೆಯಿಂದ ಟಿಕೆ ಮಾಡುವು ದರಲ್ಲೇ ಕಾಲಹರಣ ಮಾಡುತ್ತಿದ್ದಾರೆ. ಇನ್ನಾದರೂ ಸರಕಾರದ ಬಗ್ಗೆ ಟೀಕೆ ಬಿಟ್ಟು ಅಭಿವೃದ್ಧಿಗೆ ಮುಂದಾಗಿ." ಎಂದು ಹೇಳಿದರು.

"ಗೃಹ ಲಕ್ಷ್ಮಿ ಯೋಜನೆ ಜಾರಿಯಾದ ಮೇಲೆ ನಿರಂತರವಾಗಿ ತಾಲೂಕಿನ ಮಹಿಳೆಯರು ಲಾಭ ಪಡೆದಿದ್ದಾರೆ.ಎಸ್ ಸಿ 23.170. ಎಸ್ ಟಿ 12,655, ಅಲ್ಪಸಂಖ್ಯಾರ 12.365, ಹಿಂದುಳಿದ ವರ್ಗ 24,613 ಸಾಮಾನ್ಯ 17.400 ಸೇರಿ ಒಟ್ಟು **(2ನೇಪುಟಕ್ಕೆ)**

## ಮಾಜಿ ಶಾಸಕ ರಾಜಾವೆಂಕಟಪ್ಪ ನಾಯಕರ ಹುಟ್ಟುಹಬ್ಬ: ಆಸ್ಪತ್ರೆ ರೋಗಿಗಳಿಗೆ ಹಣ್ಣು ವಿತರಣೆ




**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.19–**ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರ 54ನೇ ಹುಟ್ಟು ಹಬ್ಬದ ಅಂಗವಾಗಿ ಮಂಗಳವಾರ ತಾಲೂಕಾ ಜೆಡಿಎಸ್ ವತಿಯಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣುಗಳನ್ನು ವಿತರಿಸಲಾಯಿತು.

ಇದೆ ವೇಳೆ ಮಾತನಾಡಿದ ಜೆಡಿಎಸ್ ತಾಲೂಕಾ ಯುವ ಅಧ್ಯಕ್ಷ ಪಿ.ರವಿಕುಮಾರ್, ರಾಜಾ ವೆಂಕಟಪ್ಪ ನಾಯಕರು ಸರಳ ಮತ್ತು ಸಜ್ಜನಿಕೆಯ ವ್ಯಕ್ತಿ. ಅವರ ಹುಟ್ಟುಹಬ್ಬವನ್ನು ಸರಳವಾಗಿ ಆಚರಿಸುವ ಸಲುವಾಗಿ ಆಸ್ಪತ್ರೆ ರೋಗಿಗಳಿಗೆ ಹಣ್ಣು ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ತಮ್ಮ ಅವಧಿಯಲ್ಲಿ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಮೂಲಕ ರಾಜಾ ವೆಂಕಟಪ್ಪ ನಾಯಕರು ಜನರ ಅಚ್ಚುಮೆಚ್ಚಿನ ನಾಯಕರಾಗಿದ್ದಾರೆ ಎಂದು ಅವರು ಹೇಳಿದರು.

ಜೆಡಿಎಸ್ ತಾಲೂಕಾ ಅಧ್ಯಕ್ಷ ಈರಣ್ಣ ಮರ್ಲಟ್ಟಿ, ಪುರಸಭೆ ಸದಸ್ಯ ಬಾಷಾ, ಶರಣಪ್ಪ ಮೇದಾ, ಎಚ್.ಮೌನೇಶ, ನಾಗರಾಜ ಭೋಗಾವತಿ, ಶರಣಪ್ಪ ನಂದಿಹಾಳ, ಜಲ್ಲಿ ಅಳಪ್ಪ ಮಾನ್ವಿ, ಖಲೀಲ್ ಖುರೇಷಿ, ಬಸವರಾಜಸ್ವಾಮಿ, ಬಸವನಗೌಡ ನಾಯಕ ಉಟಕನೂರು, ಯಲ್ಲಪ್ಪ ನಾಯಕ ಮಾನ್ವಿ, ಮೌಲಸಾಬ್, ಶಿವರಾಮ ನಾಯಕ ಮುಷ್ಟೂರು, ಜಯ ಕುಮಾರ, ಮ್ಯಾಕಲ್ ಮೌನೇಶ ನಾಯಕ, ಬಸವರಾಜ್ ಶೆಟ್ಟಿ, ಬಸವರಾಜ ಸ್ವಾಮಿ ಚೀಕಲಪರ್ವಿ, ಮೌನೇಶ ನಾಯಕ, ಬಸವ ಹೊಸಮನಿ, ಗೋಪಾಲ, ಯಂಕಣ್ಣ, ಖಾಜಾ ಹುಸೇನಿ, ನಾರಾಯಣಿ ಮದ್ಲಾಪುರ, ಶಿವಾನಂದ, ನಾಗರಾಜ, ದೇವರಾಜ್, ಅಂಬಣ್ಣ ನಾಯಕ ಉಮಳಿಹೂಸೂರು ಇದ್ದರು.

## ಡಿ.ದೇವರಾಜ ಅರಸ್ ಜಯಂತಿ ಆಚರಣೆ ನಿರ್ಲಕ್ಷ್ಯ: ಕ್ರಮಕ್ಕೆ ಒತ್ತಾಯ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.19–** ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರ ಜಯಂತಿ ಆಚರಣೆಯಲ್ಲಿ ತಾಲೂಕು ಆಡಳಿತ ನಿರ್ಲಕ್ಷ್ಯ ತೋರಿದ್ದಲ್ಲದೇ, ಅವಮಾನ ಮಾಡಲಾಗಿದೆ. ಕೂಡಲೇ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗಂಗಾಮತಸ್ಥ ಸಮಾಜದ ತಾಲೂಕು ಅಧ್ಯಕ್ಷ ಅಮರೇಶ ಕಲ್ಲೂರು ಅವರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಅ.18ರಂದು ಆಡಳಿತದಿಂದ ಜಯಂತಿ ಆಚರಿಸಲು ಪೂರ್ವಭಾವಿ ಸಭೆ ಮಾಡಲು, 14ರಂದೇ ತಹಸೀಲ್ದಾರರು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ನೋಟಿಸ್ ಹೊರಡಿಸಿದ್ದರು. ಆದರೆ, ಹಿಂದುಳಿದ ವರ್ಗಗಳ ವ್ಯಾಪ್ತಿಗೆ ಒಳಪಡುವ ಸುಮಾರು 25 ಜಾತಿಯ ಜನರು ಲಿಂಗಸುಗೂರಲ್ಲಿದ್ದು, ಅವರನ್ನು ಆಹ್ವಾನಿಸದೇ ಸಭೆ ನಡೆಸಿದ್ದಾರೆ. ಬಹುತೇಕ ಇಲಾಖೆ ಅಧಿಕಾರಿಗಳೂ ಸಭೆಗೆ ಹಾಜರಾಗದೇ ನಿರ್ಲಕ್ಷ್ಯತನ ತೋರಿದ್ದಾರೆ. ಸಮಾಜದ ಮುಖಂಡರನ್ನೂ ಸಭೆಗೆ ಆಹ್ವಾನಿಸದೇ ಕರ್ತವ್ಯ ಲೋಪ ಎಸಗಿರುವ ಅಧಿಕಾರಿ, ಸಿಬ್ಬಂಧಿಗಳ ಮೇಲೆ ಶಿಸ್ತುಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

## ಜನ ಸೇವೆಯ, ನವ್ಯ ಪರಿಕಲ್ಪನೆಯ ಮನೆಮನೆಗೆ ಪೊಲೀಸ್: ರಾಯಚೂರು ಜಿಲ್ಲಾ ಎಸ್ಪಿ ಎಂ.ಪುಟ್ಟಮಾದಯ್ಯ ಅವರಿಂದ ಹೊಸ ಪ್ರಯೋಗ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.19–** ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಜಿಲ್ಲಾ ಪೊಲೀಸ್ ಇಲಾಖೆಯಿಂದ ಮನೆಮನೆಗೆ ಪೊಲೀಸ್ ಎನ್ನುವ ಜನಪರ ಸೇವೆಯ ನವ್ಯ ಪರಿಕಲ್ಪನೆಯೊಂದನ್ನು ಜನತೆಗೆ ಪರಿಚಯಿಸಿ ಹೊಸ ಪ್ರಯೋಗ ಮಾಡಿದ್ದಾರೆ.ಕೇವಲ ಕಾನೂನು–ಸುವ್ಯವಸ್ಥೆ ಕಾಯ್ದುಕೊಳ್ಳುವುದಲ್ಲದೆ, ಜನಸಾಮಾನ್ಯರೊಂದಿಗೆ ನೇರ ಸಂಪರ್ಕ ಸಾಧಿಸಿ ಅವರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವುದೇ ಈ ಪರಿಕಲ್ಪನೆಯ ಉದ್ದೇಶವಾಗಿದೆ.

ಈ ಸದುದ್ದೇಶದ ಮಹತ್ವಾಕಾಂಕ್ಷಿ ಪರಿಕಲ್ಪನೆಯನ್ನು ಜನಪಯೋಗಿ ರೀತಿಯಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ರಾಯಚೂರು ಜಿಲ್ಲೆಯ ಸಾರ್ವಜನಿಕರಿಗೆ ಮನವರಿಕೆ ಮಾಡಿ ಪೊಲೀಸ್ ಇಲಾಖೆಯನ್ನು ಸಕ್ರಿಯಗೊಳಿಸಿದ್ದಾರೆ. ಮನೆಮನೆಗೆ ಪೊಲೀಸ್ ಪರಿಕಲ್ಪನೆಯ ಪ್ರಮುಖ ಅಂಶಗಳು: ಪ್ರತಿಯೊಂದು ಪೊಲೀಸ್ ಠಾಣಾ ವ್ಯಾಪ್ತಿಯನ್ನು ಇ–ಬೀಟ್ ವ್ಯವಸ್ಥೆ ಮೂಲಕ ವಿಭಜಿಸಿ, 40–50 ಮನೆಗಳ ಸಮೂಹಗಳನ್ನು ರಚಿಸಲಾಗುತ್ತದೆ. ಬೀಟ್ ಪೊಲೀಸ್ ಅಧಿಕಾರಿಗಳು ನಿರಂತರವಾಗಿ ಮನೆಮನೆಗೆ ಭೇಟಿ ನೀಡಿ, ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಿದ್ದಾರೆ.


ಕುಟುಂಬದ ಮುಖ್ಯಸ್ಥರೊಂದಿಗೆ ಸ್ನೇಹ, ವಿಶ್ವಾಸ ಮತ್ತು ಬಾಂಧವ್ಯ ಬೆಳೆಸುವುದು. ಮಹಿಳೆಯರ ಹಾಗೂ ಮಕ್ಕಳ ಸುರಕ್ಷತೆಯ ವಿಚಾರದಲ್ಲಿ ವಿಶೇಷ ಕಾಳಜಿ ವಹಿಸುವುದು. ಮಹಿಳಾ ಪೊಲೀಸ್ ಸಿಬ್ಬಂದಿಯಿಂದ ಮಹಿಳೆಯರೊಂದಿಗೆ ನೇರ ಸಂಪರ್ಕ ಸಾಧಿಸಲು ಅನುಕೂಲ ಮಾಡಿಕೊಡುವುದು. ಪ್ರತಿ ಮನೆಯಲ್ಲಿ ಭದ್ರತೆ, ಸುತ್ತಲಿನ ಪರಿಸರ ಹಾಗೂ ಸುರಕ್ಷಿತ ವಾತಾವರಣವನ್ನು ಪರಿಶೀಲಿಸಿ ಸಲಹೆ ನೀಡುವುದು. ಸಾರ್ವಜನಿಕರಿಗೆ ಪೊಲೀಸ್ ಠಾಣೆಗಳ, ನಿಯಂತ್ರಣ ಕೊಠಡಿ (112) ಹಾಗೂ ಹಿರಿಯ ಅಧಿಕಾರಿಗಳ ಸಂಪರ್ಕ ಸಂಖ್ಯೆಯನ್ನು ಹಂಚಿಕೆ ಮಾಡುವ ಮೂಲಕ ತುರ್ತು ಸಮಯದಲ್ಲಿ ನೇರವಾಗಿ ಪೊಲೀಸರನ್ನು ಸಂಪರ್ಕಿಸಲು ಉತ್ತೇಜಿಸುವುದು ಮನೆಮನೆಗೆ ಪೊಲೀಸ್ ಪರಿಕಲ್ಪನೆಯ ಪ್ರಮುಖ ಅಂಶಗಳಾಗಿವೆ.

ಜನಸಾಮಾನ್ಯರ ಪಾಲ್ಗೊಳ್ಳುವಿಕೆ ಮುಖ್ಯ ಪ್ರತಿ ಸಮೂಹಕ್ಕೆ ಸ್ಥಳೀಯರಿಂದಲೇ ಒಬ್ಬ ಜವಾಬ್ದಾರಿಯುತ ವ್ಯಕ್ತಿಯನ್ನು ಸಮೂಹ ಮುಖ್ಯಸ್ಥರನ್ನಾಗಿ ಆಯ್ಕೆ ಮಾಡಲಾಗುತ್ತದೆ. ಸಮುದಾಯದ ಪ್ರಮುಖ ಸಂಘಟನೆಗಳು, ಶೈಕ್ಷಣಿಕ ಸಂಸ್ಥೆಗಳು, ವ್ಯಾಪಾರ–ಕೈಗಾರಿಕೆಗಳು, ಎನ್‌ಜಿಓಗಳು ಮುಂತಾದವರೊಂದಿಗೆ ನಿರಂತರ ಸಂಪರ್ಕ ಸಾಧಿಸಲಾಗುತ್ತದೆ. ಸೈಬರ್ ಅಪರಾಧ, ಮಾದಕ ವಸ್ತುಗಳ ದುಷ್ಪರಿಣಾಮ, ಮಕ್ಕಳ ಭಿಕ್ಷಾಟನೆ, ಮಾನವ ಕಳ್ಳಸಾಗಣೆ ಇತ್ಯಾದಿ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯವನ್ನು ಪೊಲೀಸರು ಕೈಗೊಳ್ಳಲಿದ್ದಾರೆ. ಸಿಸಿ ಟಿವಿ ಕ್ಯಾಮೆರಾ ಅಳವಡಿಕೆಗಾಗಿ ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕರನ್ನು ಪ್ರೇರೇಪಿಸುವುದು.

ಧಾರ್ಮಿಕ ಹಾಗೂ ಪ್ರಾರ್ಥನಾ ಸ್ಥಳಗಳಿಗೆ ನಿಯಮಿತ ಭೇಟಿ ನೀಡಿ ಭದ್ರತೆ ಖಾತ್ರಿಪಡಿಸುವುದು. ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರು ಭಯವಿಲ್ಲದೆ ಬದುಕಲು ಸಮಾನತೆ ಹಾಗೂ ಸುರಕ್ಷಿತ ವಾತಾವರಣ ನಿರ್ಮಿಸುವುದು.ಏಕಾಂಗಿ ಹಿರಿಯ ನಾಗರಿಕರು, ಒಂಟಿ ಮಹಿಳೆಯರು ಹಾಗೂ ವಿಶೇಷಚೇತನರಿಗೆ ವಿಶೇಷ ಗಮನ ನೀಡುವುದು.ಪ್ರತಿ ತಿಂಗಳ ಎರಡನೇ ಶನಿವಾರ ಸಾರ್ವಜನಿಕ ಸಂಪರ್ಕ ಸಭೆಗಳನ್ನು ಏರ್ಪಡಿಸಿ ನೇರ ಸಂವಾದ ನಡೆಸುವ ಕ್ರಮಗಳ ಮೂಲಕ ಮನೆಮನೆಗೆ ಪೊಲೀಸ್ ಕಾರ್ಯದಲ್ಲಿ ಜನ ಸಾಮಾನ್ಯರ ಪಾಲ್ಗೊಳ್ಳುವಿಕೆಗೆ ಒತ್ತು ಕೊಡಲಾಗಿದೆ.

ಪೊಲೀಸ್ ಪ್ರಶಸ್ತಿ ಪ್ರತಿ ಜಿಲ್ಲೆಯಲ್ಲಿ ಪೊಲೀಸರೊಂದಿಗೆ ಉತ್ತಮ ಬಾಂಧವ್ಯ ಬೆಳೆಸುವ, ಅತ್ಯುತ್ತಮ ಸಲಹೆ ಹಾಗೂ ಮಾಹಿತಿ ನೀಡುವ ಇಬ್ಬರಿಗೆ "ಅತ್ಯುತ್ತಮ ಪೊಲೀಸ್ ಸಲಹೆಗಾರ" ಹಾಗೂ "ಅತ್ಯುತ್ತಮ ಪೊಲೀಸ್ ಸ್ನೇಹಿತ" ಪ್ರಶಸ್ತಿಗಳನ್ನು ನೀಡಲಾಗುತ್ತದೆ.





"ಈ ಪರಿಕಲ್ಪನೆಯ ಮೂಲಕ ಜನಸಾಮಾನ್ಯರು ಮತ್ತು ಪೊಲೀ ಸರ ನಡುವೆ ಸ್ನೇಹಪರ ವಾತಾವರಣ ನಿರ್ಮಾಣವಾಗಬೇಕು. ಯಾವುದೇ ಹಂತದಲ್ಲೂ ನಾಗರಿಕರ ಧರ್ಮ, ಜಾತಿ, ಆರ್ಥಿಕ ಸ್ಥಿತಿ ಮುಂತಾದ ವೈಯಕ್ತಿಕ ಮಾಹಿತಿಯನ್ನು ಪೊಲೀಸರು ಕೇಳು ವುದಿಲ್ಲ. ಸಮಾಜದಲ್ಲಿ ಸಮಾನತೆ, ಶಾಂತಿ ಮತ್ತು ಭದ್ರತೆಯನ್ನು ಕಾಪಾಡಲು 'ಮನೆ ಮನೆಗೆ ಪೊ ಲೀಸ್' ಉಪಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಬೇಕು.

–ಎಂ.ಪುಟ್ಟಮಾದಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ರಾಯಚೂರು.

## ಮೊದಲನೇಯ ಪುಟದಿಂದ

### ಗಣೇಶೋತ್ಸವ: ಸರ್ಕಾರ ಹೊರಡಿಸಿದ ಮಾರ್ಗಸೂಚಿ ಅಂಶಗಳ ಪಾಲನೆಗೆ ಜಿಲ್ಲಾಡಳಿತದಿಂದ ಕಟ್ಟುನಿಟ್ಟಿನ ಸೂಚನೆ

ತಾತ್ಕಾಲಿಕ ಟ್ಯಾಂಕ್ ಅಥವಾ ಕಟ್ಟೆ ಮತ್ತು ಕೊಳಗಳಲ್ಲಿ ಮಾತ್ರ ವಿಸರ್ಜಿಸುವುದು ಮತ್ತು ಈ ಕುರಿತು ಸ್ಥಳೀಯ ಸಂಸ್ಥೆಗಳು ಸಾರ್ವಜ ನಿಕರಿಗೆ ಪತ್ರಿಕೆಗಳ/ಮಾಧ್ಯಮಗಳ ಮೂಲಕ ಮಾಹಿತಿ ನೀಡಬೇಕು. ಮೂರ್ತಿಗಳ ವಿಸರ್ಜನೆಯ ಸಮಯದಲ್ಲಿ ಹೂವು ಹಾಗೂ ಇನ್ನಿತರ ಪೂಜಾ ಸಾಮಗ್ರಿಗಳನ್ನು ಗೊತ್ತುಪಡಿಸಿದ ತಾತ್ಕಾಲಿಕ ಟ್ಯಾಂಕ್ ಅಥವಾ ಕಟ್ಟೆ ಮತ್ತು ಕೊಳದ ದಡದಲ್ಲಿ ಇಟ್ಟಿರುವ ಬುಟ್ಟಿಗಳಲ್ಲಿ ಅಥವಾ ನಿಗಧಿತ ಜಾಗದಲ್ಲಿ ಹಾಕಬೇಕು.


ಸಾರ್ವಜನಿಕರು ಮನೆಗಳಲ್ಲಿ ಸ್ಥಾಪಿಸಲ್ಪಟ್ಟ ವಿಗ್ರಹಗಳ ವಿಸರ್ಜ ನೆಯ ಸಮಯದಲ್ಲಿ ಒಂದು ಬಕೆಟ್ ನೀರಿನಲ್ಲಿ ವಿಸರ್ಜಿಸುವ ಪದ್ಧತಿಯನ್ನು ರೂಢಿ ಮಾಡಿಕೊಳ್ಳುವುದು ಮತ್ತು ವಿಸರ್ಜನೆ ಮಾಡಲಾದ ಮಣ್ಣನ್ನು ಮನೆಗಳ ಆವರಣದಲ್ಲಿರುವ ಗಿಡಗಳ ಬದುಗಳಿಗೆ ಹಾಕಬೇಕು. ಮೂರ್ತಿಗಳ ವಿಸರ್ಜನೆಯಾದ 24 ಗಂಟೆಗಳ ಒಳಗೆ (ತಾತ್ಕಾಲಿಕ ಟ್ಯಾಂಕ್ ಅಥವಾ ಕಟ್ಟೆ ಮತ್ತು ಕೊಳಗಳ ಹತ್ತಿರ) ಬಿಟ್ಟು ಹೋದ ಸಾಮಗ್ರಿಗಳನ್ನು ಸ್ಥಳೀಯ ಸಂಸ್ಥೆಗಳು ಸಂಗ್ರಹಿಸಿ ಕಸ ವಿಲೇವಾರಿ ಜಾಗಗಳಲ್ಲಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು. ಹಬ್ಬದ ಸಮಯದಲ್ಲಿ ಶಬ್ಧ ಮತ್ತು ವಾಯು ಮಾಲಿನ್ಯ ತಡೆಗೆ ಹೆಚ್ಚಿನ ಧ್ವನಿ ಹೊರಸೂಸುವ ಧ್ವನಿವರ್ಧಕ ಮತ್ತು ಪಟಾಕಿಗಳನ್ನು ಉಪಯೋಗಿಸಬಾರದು. ಅಲ್ಲದೆ ರಾತ್ರಿ ಸಮಯ 10 ಗಂಟೆಯಿಂದ ಬೆಳಿಗ್ಗೆ 06 ಗಂಟೆಯವರೆಗೆ ಪರಿಸರ ಮತ್ತು ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಧ್ವನಿವರ್ಧಕ ಅಥವಾ ಪಟಾಕಿಗಳ ಬಳಕೆಯನ್ನು ನಿಷೇಧಿಸಲಾಗಿದ್ದು, ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆಗಾಗಿ ಜಿಲ್ಲೆಯ ನಾಗರೀಕರು ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕರು ಅಭಿವೃದ್ಧಿ ಕಡೆ ಗಮನ ಹರಿಸಲಿ : ವೆಂಕಟೇಶ ಗುತ್ತೆದಾರ

ತಾಲೂಕಿನಲ್ಲಿ 90.203 ಪಡೆಯುತ್ತಿದ್ದಾರೆ. ತಾಲೂಕಿನಲ್ಲಿ ಒಟ್ಟು 51,611 ಪಡೆಯುತ್ತಿದ್ದಾರೆ. ಶಕ್ತಿ ಯೋಜನೆಯಡಿ ತಾಲೂಕಿನಲ್ಲಿ , ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಲಾಭಗ್ರಾಹಕರು ಗೃಹಜ್ಯೋತಿ ಯೋಜನೆಯ ಲಾಭಮಹಿಳೆಯರು 195.15 ಲಕ್ಷ ಪ್ರಯಾಣದ ಲಾಭಪಡೆದಿದ್ದಾರೆ. ಅನ್ನಭಾಗ್ಯ ಯೋಜನೆಯಡಿ 3.35,935 ಕುಟುಂಬಗಳು ಲಾಭ ಪಡೆಯುತ್ತಿವೆ. ವಿನಾಕಾರಣ ಶಾಸಕರು ಸರಕಾರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಟೀಕೆ ಮಾಡದೇ ಅಭಿವೃದ್ಧಿ ಕಡೆಗೆ ಗಮನ ಹರಿಸಿ." ಎಂದರು.

ಈ ಸಂದರ್ಭದಲ್ಲಿ ಸಮಿತಿ ಸದಸ್ಯರಾದ ಸಯ್ಯದ್ ನ್ಯಾಮತುಲ್ಲಾ ಖಾದ್ರಿ, ಮಲ್ಲನಗೌಡ ಭೂಪೂರು, ಶಿವುಕುಮಾರ ಪೂಜಾರಿ, ಗದ್ದೆನಗೌಡ, ಆಸ್ಲಾಂ ಪಾಶಾ, ಗೌಡಪ್ಪ ಗೋಲಪಲ್ಲಿ ಸೇರಿದಂತೆ ಇದ್ದರು.

## ಉಪ ರಾಷ್ಟ್ರಪತಿ ಚುನಾವಣೆ: ಇಂಡಿಯಾ ಮೈತ್ರಿಕೂಟದಿಂದ ಸುದರ್ಶನ್ ರೆಡ್ಡಿ ಆಯ್ಕೆ



**ನವದೆಹಲಿ, ಆ.19–** ಮುಂದಿನ ತಿಂಗಳು 9 ರಂದು ನಡೆಯಲಿರುವ ಉಪರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಮೈತ್ರಿಕೂಟ ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಮತ್ತು ಗೋವಾದ ಮೊದಲ ಲೋಕಾಯುಕ್ತ ನ್ಯಾಯಮೂರ್ತಿ ಬಿ ಸುದರ್ಶನ್ ರೆಡ್ಡಿ ಅವರನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಿದೆ.

ದೇಶದ ಎರಡನೇ ಅತ್ಯುನ್ನತ ಸಾಂವಿಧಾನಿಕ ಹುದ್ದೆಗೆ ನಡೆಯುವ ಸ್ಪರ್ಧೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರು ಎನ್‌ಡಿಎ ಅಭ್ಯರ್ಥಿ ಮಹಾರಾಷ್ಟ್ರ ರಾಜ್ಯಪಾಲ ಮತ್ತು ಬಿಜೆಪಿಯ ಹಿರಿಯ ನಾಯಕ ಸಿಪಿ ರಾಧಾಕೃಷ್ಣನ್ ಅವರನ್ನು ಚುನಾವಣೆಯಲ್ಲಿ ಎದುರಿಸಲಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಹಾಗು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ನಡೆದ ಇಂಡಿಯಾ ಮೈತ್ರಿಕೂಟದ ನಾಯಕರ ಸಭೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರನ್ನು ಉಪರಾಷ್ಟ್ರಪತಿ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ

ಸಭೆಯ ಬಳಿಕ ಮಲ್ಲಿಕಾರ್ಜುನ ಖರ್ಗೆ ಈ ವಿಷಯ ಪ್ರಕಟಿಸಿದ್ದಾರೆ.

ಇಂಡಿಯಾ ಮೈತ್ರಿಕೂಟದ ಪರ ಸಂಭ್ಯಾವ್ಯ ಅಭ್ಯರ್ಥಿಗಳ ಪೈಕಿ ಚಂದ್ರಯಾನ–1 ಯೋಜನೆಯ ಮೇಲ್ವಿಚಾರಣೆ ವಹಿಸಿದ್ದ ಮಾಜಿ ಇಸ್ರೋ ವಿಜ್ಞಾನಿ ಮೈಲ್ವಾಮಿ ಅಣ್ಣಾದೊರೈ , ಮಹಾತ್ಮ ಗಾಂಧಿಯವರ ಮರಿಮೊಮ್ಮಗ ತುಷಾರ್ ಗಾಂಧಿ ಜೊತೆಗೆ ಮಹಾರಾಷ್ಟ್ರದ ದಲಿತ ನಾಯಕರೊಬ್ಬರು ಇಂಡಿಯಾ ಮೈತ್ರಿಕೂಟದ ಬಣ ಅಭ್ಯರ್ಥಿಯನ್ನಾಗಿ ಪರಿಗಣಿಸಿದ್ದು ಒಬ್ಬರನ್ನು ಅಭ್ಯರ್ಥಿ ಆಯ್ಕೆ ಮಾಡುವ ಸಾಧ್ಯತೆ ಇದೆ ಎನ್ನಲಾಗಿತ್ತು ಅಂತಿಮವಾಗಿ ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರನ್ನು ಇಂಡಿಯಾ ಬಣ ಆಯ್ಕೆ ಮಾಡಿದೆ.

ರಾಜಕೀಯೇತರ ವ್ಯಕ್ತಿಯನ್ನು ಬೆಂಬಲಿಸುವ ಈ ಕ್ರಮ ಪಕ್ಷಾತೀತವಾಗಿ ವ್ಯಾಪಕ ಬೆಂಬಲ ಗಳಿಸಬಹುದು ಎನ್ನುವುದು ಇಂಡಿಯಾ ಮೈತ್ರಿಕೂಟದ ನಿರ್ಧಾರವಾಗಿದೆ.

ಉಪರಾಪತಿ ಹುದ್ದೆಗೆ ನಾಮಪತ್ರ ಸಲ್ಲಿಸಲು ನಾಡಿದ್ದು ಗುರುವಾರ ಕಡೆಯ ದಿನವಾಗಿದೆ. ನಾಳೆ ಎನ್ ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರು ಎನ್ ಡಿಎ ನಾಯಕರೊಂದಿಗೆ ನಾಮಪತ್ರ ಸಲ್ಲಿಸಲಿದ್ದಾರೆ

ಎನ್ ಡಿ ಎ ಅಭ್ಯರ್ಥಿ ಬೆಂಬಲಿಸಲು ಪಿಎಂ ಮನವಿ:

ಉಪರಾಷ್ಟ್ರಪತಿ ಸ್ಥಾನಕ್ಕಾಗಿ ಸೆಪ್ಟಂಬರ್ 9 ರಂದು ನಡೆಯಲಿರುವ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರನ್ನು ಬೆಂಬಲಿಸುವಂತೆ ಪ್ರಧಾನಿ ನರೇಂದ್ರ ಮೋದಿ ವಿರೋಧ ಪಕ್ಷಗಳ ನಾಯಕರಿಗೆ ಮನವಿ ಮಾಡಿದ್ದಾರೆ

ಎನ್‌ಡಿಎ ಅಭ್ಯರ್ಥಿಯನ್ನು ಉಪರಾಷ್ಟ್ರಪತಿ ಚುನಾವಣೆಯಲ್ಲಿ ಬೆಂಬಲಿಸುವ ಮೂಲಕ ಸರ್ವಾನುಮತದಿಂದ ಆಯ್ಕೆ ಮಾಡಬೇಕು. ಸಿಪಿ ರಾಧಾಕೃಷ್ಣನ್ ಉಪರಾಷ್ಟ್ರಪತಿ ಹುದ್ದೆ ಅತ್ಯುತ್ತಮ ಆಯ್ಕೆ ಎಂದಿದ್ದಾರೆ.

ಉಪರಾಷ್ಟ್ರಪತಿ ಸ್ಥಾನಕ್ಕೆ ನಡೆಯಲಿರುವ ಚುನಾವಣೆಯಲ್ಲಿ ಎನ್ ಡಿಎ ಅಭ್ಯರ್ಥಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡುವ ಮೂಲಕ ಹೊಸ ರಾಜ್ಯಸಭಾ ಅಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲು ಸಹಕರಿಸಿ ಎಂದು ವಿರೋಧ ಪಕ್ಷಗಳ ನಾಯಕರಿಗೆ ಮನವಿ ಮಾಡಿದ್ದಾರೆ

ಈ ನಿಟ್ಟಿನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೂ ಕೂಡ ಎಲ್ಲಾ ವಿರೋಧ ಪಕ್ಷದ ನಾಯಕರೊಂದಿಗೆ ಚರ್ಚೆ ನಡೆಸಿದ್ದು ವಿರೋಧ ಪಕ್ಷಗಳ ನಾಯಕರು ಎನ್ ಡಿಎ ಉಪರಾಷ್ಟ್ರಪತಿ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರಿಗೆ ಬೆಂಬಲ ನೀಡಿ ಎಂದಿದ್ದರು. ಈ ನಡುವೆ ಇಂಡಿಯಾ ಮೈತ್ರಿಕೂಟ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಲು ನಿರ್ಧರಿಸಿದ್ದು ಸೆಪ್ಟೆಂಬರ್ 9 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯ ತನಕ ಮತದಾನ ನಡೆಯಲಿದ್ದು ಅಂದೇ ಫಲಿತಾಂಶ ಪ್ರಕಟವಾಗಲಿದೆ

ಯಾರು ನ್ಯಾಯಮೂರ್ತಿ ಸುದರ್ಶನ ರೆಡ್ಡಿ

ಆಂಧ್ರಪ್ರದೇಶದ ರಂಗಾರೆಡ್ಡಿ ಜಿಲ್ಲೆಯಲ್ಲಿ ಜನಿಸಿದ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರು 1971 ರಲ್ಲಿ ವಕೀಲರಾಗಿ ತಮ್ಮ ವೃತ್ತಿಜೀವನ ಪ್ರಾರಂಭಿಸಿದರು ಮತ್ತು ಆಂಧ್ರಪ್ರದೇಶ ಹೈಕೋರ್ಟ್‌ನಲ್ಲಿ ವಕೀಲರಾಗಿ ಅಭ್ಯಾಸ ಮಾಡಿ 1995 ರಲ್ಲಿ ಹೈಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು

2005 ರಲ್ಲಿ ಗುವಾಹಟಿ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಬಳಿಕ ಜನವರಿ 2007 ರಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು ಮತ್ತು ಜುಲೈ 2011 ರಲ್ಲಿ ನಿವೃತ್ತರಾದರು. ನಂತರ ಗೋವಾದ ಮೊದಲ ಲೋಕಾಯುಕ್ತರಾಗಿಯೂ ಸೇವೆ ಸಲ್ಲಿಸಿದ್ದರು

ಎನ್ ಡಿಎ ಅಭ್ಯರ್ಥಿಗೆ ಅವಕಾಶ ಹೆಚ್ಚು

ಲೋಸಸಭೆ ಮತ್ತು ರಾಜ್ಯಸಭೆಯಲ್ಲಿ ಎನ್ ಡಿ ಎ ಮೈತ್ರಿಕೂಟದ ಸದಸ್ಯರು ಹೆಚ್ಚಿರುವ ಹಿನ್ನೆಲೆಯಲ್ಲಿ ಎನ್ ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರ ಗೆಲುವು ಖಚಿತ ಎಂದು ಹೇಳಲಾಗಿದೆ.

.ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರನ್ನು ಒಳಗೊಂಡ ಚುನಾವಣಾ ಕಾಲೇಜಿನಿಂದ ಉಪರಾಷ್ಟ್ರಪತಿ ಅವರನ್ನು ಆಯ್ಕೆ ಮಾಡಲಾಗುತ್ತದೆ. ಖಾಲಿ ಹುದ್ದೆಗಳನ್ನು ಹೊರತುಪಡಿಸಿ, ಪ್ರಸ್ತುತ ಚುನಾವಣಾ ಕಾಲೇಜಿನಲ್ಲಿ 782 ಸದಸ್ಯರಿದ್ದಾರೆ. ಇದರರ್ಥ ಗೆಲ್ಲುವ ಪಕ್ಷವ ಕನಿಷ್ಠ 392 ಮತಗಳನ್ನು ಹೊಂದಿರಬೇಕು. ಬಿಜೆಪಿ ನೇತೃತ್ವದ ಎನ್ ಡಿಎ ಸರ್ಕಾರ ಅಗತ್ಯ ಬಹುಮತ ಹೊಂದಿದೆ.

## ತುಂಗಭದ್ರಾ ನೀರಿನಮಟ್ಟ ಹೆಚ್ಚಳ: ಜಾಗೃತೆಯಿಂದಿರಲು ಅಧಿಕಾರಿಗಳಿಗೆ ಡಿ.ಸಿ. ನಿತೀಶ್ ಕೆ ಸೂಚನೆ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.19–** ಒಳಹರಿವಿನ ಆಧಾರದ ಮೇಲೆ ತುಂಗಭದ್ರಾ ಜಲಾಶಯಕ್ಕೆ ಆಗಸ್ಟ್ 19ರಿಂದ 1,15,000 ಕ್ಯೂಸೆಕ್‌ಗಳಿಂದ 1,40,000 ಕ್ಯೂಸೆಕ್‌ಗಳವರೆಗೆ ನೀರು ಹರಿಸಬಹುದಾಗಿದ್ದು, ಆದ್ದರಿಂದ ತುಂಗಭದ್ರಾ ನದಿಯ ಕೆಳಭಾಗದ ರಾಯಚೂರು ಜಿಲ್ಲಾ ವ್ಯಾಪ್ತಿಯ ಹಳ್ಳಿಗಳ ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕು ಮತ್ತು ಸಾರ್ವಜನಿಕರಿಗೆ ಎಚ್ಚರಿಕೆ ವಹಿಸಲು, ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ತಿಳಿಸಬೇಕು ಎಂದು ರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.


ಆಗಸ್ಟ್ 19ರ ಬೆಳಿಗ್ಗೆ 10 ಗಂಟೆಗೆ ತುಂಗಭದ್ರಾ ಜಲಾಶಯದ ಮಟ್ಟವು 1624.39 ಅಡಿ ಆಗಿದ್ದು, 74.582 ಟಿಎಂಸಿ ಸಾಮರ್ಥ್ಯ ಹೊಂದಿದೆ. ಇದು 105.788 ಟಿಎಂಸಿ ಸಾಮರ್ಥ್ಯದ 1633.00 ಅಡಿಗೆ ಹೋಲಿಸಿದರೆ ತುಂಗಭದ್ರಾ ಜಲಾಶಯಕ್ಕೆ ಪ್ರಸ್ತುತ ಒಳಹರಿವು ಸುಮಾರು 1,20, 000 ಕ್ಯೂಸೆಕ್ಸ್ ಆಗಿದ್ದು, ತುಂಗಾ ಜಲಾಶಯ (77000 ಕ್ಯೂಸೆಕ್ ಬಿಡುಗಡೆ) ಭದ್ರಾ ಅಣೆಕಟ್ಟು (40000 ಕ್ಯೂಸೆಕ್), ವರದಾ ನದಿಯಿಂದ ನೀರು ಬಿಡುಗಡೆಯಾಗುವುದರಿಂದ ಒಳಹರಿವು 1,50,000 ಕ್ಯೂಸೆಕ್‌ಗಳಿಗೆ ಹೆಚ್ಚಾಗುತ್ತದೆ. ತುಂಗಭದ್ರಾ ಜಲಾಶಯದ ಜಲಾನಯನ ಪ್ರದೇಶದಲ್ಲಿ 11000 ಕ್ಯೂಸೆಕ್ ಮಳೆಯಾಗಿದೆ. ನೀರಿನ ಮಟ್ಟ ಏರುತ್ತಿರುವ ಹಿನ್ನೆಲೆಯಲ್ಲಿ

ಮುಂಜಾಗ್ರತೆ ವಹಿಸಬೇಕು ಎಂದು ತುಂಗಭದ್ರಾ ಅಣೆಕಟ್ಟಿನಿಂದ ಎಚ್ಚರಿಕೆ ಸಂದೇಶ ಬಂದಿರುವುದರಿಂದ ಅಧಿಕಾರಿಗಳು, ತುಂಗಭದ್ರಾ ಅಣೆಕಟ್ಟಿನ ಕೆಳಭಾಗದ ಪ್ರದೇಶದ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

## ಕೃಷ್ಣಾ ನದಿಗೆ 1:80ಲಕ್ಷ ಕ್ಯೂಸೆಕ್ ನೀರು ಬಿಡುಗಡೆ: ಶಿಲಹಳ್ಳಿ ಸೇತುವೆ ಮುಳುಗಡೆ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.19–** ತಾಲ್ಲೂಕಿನ ಶೀಲಹಳ್ಳಿ ಸೇತುವೆ ನೀರಿನ ಪ್ರಮಾಣ ಹೆಚ್ಚಾಗಿದ್ದರಿಂದ ಮುಳುಗಿದ್ದು, ಸುತ್ತಮುತ್ತಲಿನ ನಾಲ್ಕು ಗ್ರಾಮಗಳ ರಸ್ತೆ ಸಂಪರ್ಕ ಸಂಪೂರ್ಣವಾಗಿ ಕಡಿತಗೊಂಡಿದೆ.



ತಾಲೂಕಿನಲ್ಲಿ ಸತತ ಐದಾರು ದಿನಗಳಿಂದ ಸುರಿಯುತ್ತಿರುವ ಮಳೆಯಿಂದ ಕೃಷ್ಣಾ ನದಿಗೆ 1 ಲಕ್ಷ 80 ಸಾವಿರ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದ್ದು, ಇದರ ಪರಿಣಾಮವಾಗಿ ಯಳಗುಂದಿ, ಯರಗೋಡಿ, ಕಡದರಗಡ್ಡಿ, ಓಂಕಾರದೊಡ್ಡಿ, ಮ್ಯಾದರದೊಡ್ಡಿ ಹಾಗೂ ಹಂಚಿನಾಳ ಗ್ರಾಮಗಳ ಸಂಪರ್ಕ ತಾತ್ಕಾಲಿಕವಾಗಿ ಸ್ಥಗಿತಗೊಂಡಿದೆ. ಹಳ್ಳ–ಕೊಳಗಳಿಂದ ನೀರಿನ ಹರಿವು ಹೆಚ್ಚಿದ ಕಾರಣ ನದಿಯಲ್ಲಿ ನೀರಿನ ಪ್ರಮಾಣ ತೀವ್ರ ಏರಿಕೆಯಾಗಿದೆ.

ನಾರಾಯಣಪುರ ಜಲಾಶಯವೂ ತುಂಬಿಕೊಂಡಿದ್ದು, ಹೆಚ್ಚಿನ ಪ್ರಮಾಣದ ನೀರನ್ನು ಬಿಡುವ ಸಾಧ್ಯತೆ ಹೆಚ್ಚಾಗಿದೆ. ನಡುಗಡ್ಡೆ ಜನರು ಸುರಕ್ಷಿತವಾಗಿ ಇರಲು ತಾಲ್ಲೂಕು ಆಡಳಿತ ಸೂಚನೆ ನೀಡಿದೆ.

## ಅರಕೇರಾ ಖೋಖೋ ಕ್ರೀಡಾಪಟುಗಳಿಗೆ ಸಮವಸ್ತ್ರ ವಿತರಣೆ

ಯುವ ಮಾರ್ಗ ಸುದ್ದಿ

**ಅರಕೇರಾ,ಆ.19–** ಪಟ್ಟಣದಲ್ಲಿನ ಶ್ರೀ ಸಿದ್ದಯ್ಯ ಹವಲ್ದಾರ ಸರಕಾರಿ ಬಾಲಕರ ಪ್ರೌಢಶಾಲೆಯ ಖೋಖೋ ಕ್ರೀಡಾಪಟುಗಳಿಗೆ 15 ಸಮವಸ್ತ್ರವನ್ನು ನೀಡುವದರ ಮೂಲಕಕ್ರೀಡೆಗಳಿಗೆ ಪ್ರೋತ್ಸಾಹ ನೀಡಿದ ಅರಕೇರಾ ಭಾರತೀಯ ಜನತಾ ಪಕ್ಷದ ತಾಲೂಕ ಯುವ ಘಟಕದ ಅಧ್ಯಕ್ಷರಾದ ಕೆ.ಭಗವಂತ್ರಾಯನಾಯಕ ವಿತರಣೆ ಮಾಡಿದರು.




ಕ್ರೀಡಾ ಸಮವಸ್ತ್ರ ವಿತರಿಸಿ ಮಾತನಾಡಿ ಮಕ್ಕಳ ಸಮಗ್ರ ಬೆಳವಣ ಗೆಯಲ್ಲಿ ಶಿಕ್ಷಣದ ಜತೆಗೆ ಕ್ರೀಡೆಯು ಮುಖ್ಯ ಎಂದು ಹೇಳಿದರು.,ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆ ಅಗತ್ಯವಾಗಿದೆ,ಗೆಲ್ಲುವ ಉತ್ಸಾಹದಿಂದ ಕ್ರೀಡೆಯಲ್ಲಿ ಭಾಗವಹಿಸುವುದರ ಮೂಲಕ ಖಂಡಿತ ಜಯ ಸಿಗುತ್ತದೆ ಎಂದು ಕ್ರೀಡಾಪಟುಗಳಿಗೆ ಹೇಳಿದರು.

ಸಂದರ್ಭದಲ್ಲಿ ಹನುಮಂತ್ರಾಯ ಪೂಜಾರಿ(ಹಮ್ಮುಪೂಜಾರಿ) ರಾಕೇಶಗೌಡಪೋಲಿಸ್ ಪಾಟೀಲ್, ವೆಂಕಟೇಶನಾಯಕ ಗುರಿಕಾರ ರಾಘವೇಂದ್ರನಾಯಕ ಜಲ್ಲೆ,ಬಸವಲಿಂಗಯ್ಯಸ್ವಾಮಿ ಹಿರೇಮಠ,ತನುಜಕುಮಾರ ಕುರುಕುಂದಿ, ಇಮ್ರಾನ್, ಅಜೀತನಾಯಕ ಶಾಖೆ,ದೇವಾದತ್ತ ಉಪಸ್ಥಿತರಿದ್ದರು.

## ಬೆಟ್ಟದ ಶ್ರೀಶೈಲ ಮಲ್ಲಿಕಾರ್ಜುನಸ್ವಾಮಿ ಮಹಾರಥೋತ್ಸವ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.19–**ತಾಲೂಕಿನ ಬ್ಯಾಗವಾಟ ಗ್ರಾಮದಲ್ಲಿನ ಬೆಟ್ಟದ ಶ್ರೀ ಶೈಲ ಭ್ರಮರಾಂಭ ಸಮೇತ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಮಂಗಳವಾರ ಅಂಗವಾಗಿ ಶ್ರೀ ಶೈಲ ಭ್ರಮರಾಂಭ ಸಮೇತ ಶ್ರೀ ಮಲ್ಲಿಕಾರ್ಜುನಸ್ವಾಮಿಗೆ ಬೆಳಿಗ್ಗೆ ಅಭೀಷೆಕ, ಬಿಲ್ವಾರ್ಚಾನೆ ಮಹಾಮಂಗಳಾರತಿ, ಸೇರಿದಂತೆ ವಿಶೇಷ ಪೂಜೆ ಸಲ್ಲಿಸಲಾಯಿತು.



ಪಲ್ಲಕ್ಕಿಯಲ್ಲಿ ಶ್ರೀ ಶೈಲ ಮಲ್ಲಿಕಾರ್ಜುನ ಸ್ವಾಮಿ ಹಾಗೂ ಶ್ರೀ ಭ್ರಮರಂಭ ದೇವಿಯ ಉತ್ಸವ ಮೂರ್ತಿಗಳನ್ನು ಮೆರವಣಿಗೆ ನಡೆಸಿ ದೇವಸ್ಥಾನದ ಆವರಣದಲ್ಲಿನ ರಥದಲ್ಲಿ ಕೂಡಿಸಿದ ನಂತರ ಶ್ರೀ ಶೈಲ ಮಲ್ಲಿಕಾರ್ಜುನ ಸ್ವಾಮಿಯ ಮಹಾರಥಕ್ಕೆ ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು ಪೂಜೆ ಸಲ್ಲಿಸಿ ಚಾಲನೆ ನೀಡಿದರು ನಂತರ ಸಾವಿರಾರು ಭಕ್ತರು ರಥವನ್ನು ಎಳೆದರು.

ಬ್ಯಾಗವಾಟ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಬೆಟ್ಟದ ಶ್ರೀ ಶೈಲ ಮಲ್ಲಿಕಾರ್ಜುನಸ್ವಾಮಿ ಹಾಗೂ ಶ್ರೀ ಭ್ರಮರಂಭ ದೇವಸ್ಥಾನಗಳಲ್ಲಿ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿ ರಥಕ್ಕೆ ಹೂವು ,ಹಣ್ಣು, ಉತ್ತುತಿ ಹಾಕಿ ಜಯಘೋಷ ಮಾಡಿದರು. ಮಾಜಿ ಶಾಸಕ ಬಸವನಗೌಡ ಬ್ಯಾಗವಾಟ , ಸೇರಿದಂತೆ ಗ್ರಾಮದ ಮುಖಂಡರು, ಭಕ್ತರು ಭಾಗವಹಿಸಿದರು.

# ಪೊಲೀಸರ ಭರ್ಜರಿ ಬೇಟೆ:5.88 ಕೋಟಿ ಡ್ರಗ್ಸ್ ವಶ

**ಬೆಂಗಳೂರು,ಆ.19–**ಮಾದಕವಸ್ತು ದಂಧೆ ವಿರುದ್ಧ ಸಮರ ಸಾರಿರುವ ನಗರ ಪೊಲೀಸರು ಮೂವರು ವಿದೇಶಿ ಪ್ರಜೆಗಳು ಸೇರಿ 8 ಮಂದಿ ಡ್ರಗ್ ಫೆಡ್ಲರ್ ಗಳನ್ನು ಬಂಧಿಸಿ 5.88ಕೋಟಿ ಮೌಲ್ಯದ ಎಂಡಿಎಂಎ,ಗಾಂಜಾ ಜಪ್ತಿಮಾಡಿದ್ದಾರೆ.

ಬಂಧಿತರಿಂದ ಕೆಜಿಗಟ್ಟಲೆ ಎಂಡಿಎಂಎ ಕ್ರಿಸ್ಟಲ್ ಗಳು,ಗಾಂಜಾ ಇನ್ನಿತರ ಮಾದಕ ವಸ್ತುಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

**5 ಕೋಟಿ ಡ್ರಗ್ಸ್ ಜಪ್ತಿ:** ಎಂಡಿಎಂಎ ಕ್ರಿಸ್ಟಲ್‌ನ್ನು ಮಾರಾಟ ಮಾಡುತ್ತಿದ್ದ ಕಾಂಗೋ ದೇಶದ ಜೋಯಲ್ ಕಾಂಬೋಗ್(28)ಹಾಗೂ ಮಿಸ್ ಜಾಯ್ ಸಂಡೆ(22)ನನ್ನು ಬಂಧಿಸಿ 5 ಕೋಟಿ ಮೌಲ್ಯದ 2 ಕೆಜಿ 150 ಗ್ರಾಂ ಎಂಡಿಎಂಎ ಕ್ರಿಸ್ಟಲ್ ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಎಲೆಕ್ಟ್ರಾನಿಕ್‌ಸಿಟಿ 1ನೇ ಹಂತದ ಬೆಟ್ಟದಾಸನಪುರ, ಕೇರಳ ಮಸೀದಿ ರಸ್ತೆಯಲ್ಲಿರುವ ಮಹಾಲಕ್ಷ್ಮಿ ಲೇಔಟ್‌ನ ಖಾಲಿ ಜಾಗದಲ್ಲಿ ಎಂಡಿಎಂಎ ಮಾರಾಟ ಮಾಡುತ್ತಿದ್ದ ಖಚಿತವಾದ ಮಾಹಿತಿಯನ್ನು ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಲಾಗಿದೆ.

ಬಂಧಿತರಲ್ಲಿ ವಿದೇಶಿ ಮಹಿಳಾ ಡ್ರಗ್ ಪೆಡ್ಲರ್ ಮಿಸ್ ಜಾಯ್ ಸಂಡೆ ತನ್ನದೇ ದೇಶದ ಇನ್ನೊಬ್ಬನ ಜೊತೆ ಸೇರಿ ಕಡಿಮೆ ಬೆಲೆಗೆ ಎಂಡಿಎಂಎ ಕ್ರಿಸ್ಟಲ್‌ನ್ನು ಖರೀದಿಸಿಕೊಂಡು ಬಂದು, ಸಾರ್ವಜನಿಕರಿಗೆ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದುದ್ದಾಗಿ ತಿಳಿಸಿದ್ದಾಳೆ ಇವರ ಜೊತೆ ಪ್ರಕರಣದಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿರುವ ಮತ್ತೊಬ್ಬನ ಬಂಧನಕ್ಕೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಹೇಳಿದರು.

**255 ಗ್ರಾಂ ಎಂಡಿಎಂಎ ಜಪ್ತಿ:** ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಸಿಬ್ಬಂದಿಯು ಅವಲಹಳ್ಳಿನ ಮರಿಯಪ್ಪ ಲೇಔಟ್, ಮನೆಯೊಂದರಲ್ಲಿ ವಾಸವಾಗಿದ್ದ ವಿದೇಶಿ ಡ್ರಗ್ ಫೆಡ್ಲರ್ ದಕ್ಷಿಣ ಆಫ್ರಿಕಾದ ಸೆನಗಲ್ ನ ಡೆಕೋಸ್ಟಾ ಜಾನ್( 36) ನನೆ ಬಂಧಿಸಿ 40 ಲಕ್ಷ ಮೌಲ್ಯದ 255 ಗ್ರಾಂ ಎಂಡಿಎಂಎ ಜಪ್ತಿ ಮಾಡಿದ್ದಾರೆ.

ಆರೋಪಿಯು 2024ನೇ ಸಾಲಿನ ಅಕ್ಟೋಬರ್ ನಲ್ಲಿ ಪ್ರವಾಸಿ ವೀಸಾದಡಿ ದೆಹಲಿಗೆ ಬಂದು ಬಟ್ಟೆ ವ್ಯಾಪಾರ ಮಾಡಿಕೊಂಡಿದ್ದು ಇತ್ತೀಚೆಗೆ ಅವಲಹಳ್ಳಿಯಲ್ಲಿ ಬಂದು ಬಟ್ಟೆ ವ್ಯಾಪಾರ ಮುಂದುವರೆಸಿದ್ದನು, ವ್ಯಾಪಾರದಲ್ಲಿ ಬರುತ್ತಿದ್ದ ಹಣವು ಆತನಿಗೆ ಸಾಲದೇ ಡ್ರಗ್ಸ್ ಮಾರಾಟ ಮಾಡುತ್ತಿದ್ದು, ವೀಸಾ ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ಪತ್ತೆಯಾಗಿದೆ.

ಆರೋಪಿಯನ್ನು ಸುದೀರ್ಘ ವಿಚಾರಣೆ ನಡೆಸಿದಾಗ,ಆತನಿಗೆ ಪರಿಚಯದ ವಿದೇಶದಲ್ಲಿರುವ ವ್ಯಕ್ತಿಯೋರ್ವನಿಂದ, ಎಂಡಿಎಂಎ ಕ್ರಿಸ್ಟಲ್‌ನ್ನು ಕಡಿಮೆ ಬೆಲೆಗೆ ಖರೀದಿಸುತ್ತಿರುವುದಾಗಿ ಬಾಯ್ಬಿಟ್ಟಿದ್ದು,ಆತನ ವಿರುದ್ಧ ಆವಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

**22 ಕೆಜಿ ಗಾಂಜಾ ಜಪ್ತಿ:** ಎಚ್‌ಎಸ್‌ಆರ್ ಲೇಔಟ್ ಪೊಲೀಸರು ತ್ರಿಪುರ ರಾಜ್ಯದ ಸುಬ್ಬೀರ್ ದೇವ್ ವರ್ಮ (46)ನನ್ನು ಬಂಧಿಸಿ 13.50 ಲಕ್ಷ ರೂ ಮೌಲ್ಯದ 22 ಕೆ.ಜಿ 180 ಗ್ರಾಂ ಗಾಂಜಾ ವಶಪಡಿಸಿಕೊಂಡಿದ್ದಾರೆ.

ಆರೋಪಿಯು ಎಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯ ಬಿ ಡಬ್ಲ್ಯೂ ಎಸ್ ಎಸ್ ಬಿ ಕಚೇರಿ ಮುಂಭಾಗ ಗಾಂಜಾ ಮಾರಾಟ ಮಾಡಲು ಯತ್ನಿಸುತ್ತಿದ್ದಾಗ ಕಾರ್ಯಾಚರಣೆ ಕೈಗೊಂಡು ಬಂಧಿಸಲಾಗಿದೆ ಎಂದು ಹೇಳಿದರು.

ಈತನ ಮೇಲೆ ಎಚ್‌ಎಸ್‌ಆರ್ ಹಾಗೂ ಯಲಹಂಕ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಡ್ರಗ್ಸ್ ಪ್ರಕರಣಗಳು ದಾಖಲಾಗಿದ್ದು,ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

**ಬಿಬಿಎಂ ವಿದ್ಯಾರ್ಥಿ ಸೆರೆ:** ಸಂಪಿಗೆಹಳ್ಳಿ ಪೊಲೀಸರು ಶ್ರೀರಾಮಪುರ ಮುಖ್ಯರಸ್ತೆಯ ಜಾಲಿ ಮರದ ತೋಪಿನ ಬಳಿ ಎಂಡಿಎಂಎ ಮಾರಾಟ ಮಾಡುತ್ತಿದ್ದ ಬಿಬಿಎಂ ವಿದ್ಯಾರ್ಥಿ ವಾಷಿಂಗ್ ಅಕ್ರಮ್ (30)ನನ್ನು ಬಂಧಿಸಿ 3.40 ಲಕ್ಷ ಮೌ ಎಂಡಿಎಂಎ ಕ್ರಿಸ್ಟಲ್ ಗಳನ್ನು ಜಪ್ತಿ ಮಾಡಿದ್ದಾರೆ.ಹಾಸನದ ಮತ್ತೋರ್ವ ಸಹಚರನ ಸೇರಿ ಮಾದಕವಸ್ತು ಮಾರಾಟ ದಂಧೆಯಲ್ಲಿ ತೊಡಗಿದ್ದು,ತಲೆಮರೆಸಿಕೊಂಡಿರುವ ಆತನ ಸಹಚರನ ಬಂಧನಕ್ಕೆ ಶೋಧ ನಡೆಸಲಾಗಿದೆ ಎಂದು ಹೇಳಿದರು.

**ಮೂವರು ಬಂಧನ:** ಯಲಹಂಕ ಪೊಲೀಸರು ಎಂಬಿಎ, ಆಟೋಮೊಬೈಲ್ ಇಂಜಿನಿಯರಿಂಗ್ ಮತ್ತು ಬಿಕಾಂ ಓದುತ್ತಿದ್ದ ಮೂವರು ವಿದ್ಯಾರ್ಥಿಗಳು ಡ್ರಗ್ಸ್ ಮಾರಾಟ ಮಾಡುತ್ತಿರುವುದನ್ನು ಪತ್ತೆಹಚ್ಚಿ 15 ಲಕ್ಷ ಮೌಲ್ಯದ 117 ಗ್ರಾಂ ಎಂಡಿಎಂಎ, ಒಂದು ಕಾರು, 3 ಮೊಬೈಲ್ ಗಳನ್ನು ವಶಪಡಿಸಿಕೊಂಡಿದ್ದಾರೆ.

ಯಲಹಂಕ ಪ್ರೇರಣಾ ಮೋಟಾರ್ಸ್ ಪಕ್ಕದ ಸಾರ್ವಜನಿಕ ರಸ್ತೆಯಲ್ಲಿ ಮೂವರು ಎಂಡಿಎಂಎ ಮಾರಾಟ ಮಾಡುತ್ತಿದ್ದ ಮಾಹಿತಿಯನ್ನು ಆಧರಿಸಿ ಕಾರ್ಯಾಚರಣೆ ಕೈಗೊಂಡು ಬಂಧಿಸಲಾಗಿದೆ ಎಂದು ಕಮೀಷನರ್ ತಿಳಿಸಿದರು.

ಕೇರಳ ಮೂಲದ ಬಂಧಿತ ಮೂವರು ಕೇರಳದಿಂದ ಕಡಿಮೆ ಬೆಲೆಗೆ ಎಂಡಿಎಂಎ ಖರೀದಿ ಮಾಡಿಕೊಂಡು ಬಂದು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದನ್ನು ಬಾಯ್ಬಿಟ್ಟಿದ್ದಾರೆ.

**48 ಮೊಬೈಲ್ ಜಪ್ತಿ:** ನಿಷೇದಿತ ಮಾದಕ ವಸ್ತು ಮಾರಾಟದಲ್ಲಿ ತೊಡಗಿ ತಲೆಮರಿಸಿಕೊಂಡಿದ್ದ ಓರ್ವನನ್ನು ಕೋರಮಂಗಲ ಪೊಲೀಸರು ಬಂಧಿಸಿ 16 ಲಕ್ಷ ಮೌಲ್ಯದ ವಿವಿಧ ಕಂಪನಿಯ 48 ಮೊಬೈಲ್ ಗಳನ್ನು ವಶಪಡಿಸಿಕೊಂಡಿಸಿದ್ದಾರೆ.

ನಗರದ ಕೋರಮಂಗಲ ಪೊಲೀಸ್ ಠಾಣೆ ಪೊಲೀಸರು ಕಳ್ಳರಿಂದ ವಶಪಡಿಸಿಕೊಂಡಿರುವ ಮೊಬೈಲ್‌ಗಳನ್ನು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪರಿಶೀಲನೆ ನಡೆಸಿದರು. ಪೊಲೀಸ್ ಅಧಿಕಾರಿಗಳೂ ಇದ್ದಾರೆ.

ಬಾಪೂಜಿನಗರದ ಮೊಹಮ್ಮದ್ ತೌಸಿಫ್ (24) ಬಂಧಿತ ಆರೋಪಿಯಾಗಿದ್ದಾನೆ. ಕೋರಮಂಗಲದಲ್ಲಿರುವ ಹೊಟೇಲ್‌ನ ರೂಮ್‌ವೊಂದರಲ್ಲಿ ನಾಲ್ಕರಿಂದ ಐವರು ಡ್ರಗ್ಸ್ ಮಾರಾಟ ಮಾಡುತ್ತಿದ್ದ ಖಚಿತ ಮಾಹಿತಿಯನ್ನು ಆಧರಿಸಿ ದಾಳಿ ನಡೆಸಿ ನಾಲ್ವರು ವ್ಯಕ್ತಿಗಳನ್ನು ವಶಕ್ಕೆ ಪಡೆದು ಅವರುಗಳಿಂದ 12.62 ಗ್ರಾಂ ಗಾಂಜಾ ವಶಕ್ಕೆ ಪಡೆದುಕೊಂಡು ಪ್ರಕರಣದಲ್ಲಿ





ತಲೆಮರಿಸಿಕೊಂಡಿದ್ದ ವ್ಯಕ್ತಿಯನ್ನು ಗೋರಿಪಾಳ್ಯದಲ್ಲಿ ಬಂಧಿಸಲಾಗಿದೆ ಎಂದರು.

**ವಾರಸುದಾರ ಪತ್ತೆಗೆ ಕ್ರಮ:** ವಿಚಾರಣೆಯಲ್ಲಿ ಆತ ಇತರೆ ನಾಲ್ವರು ಆರೋಪಿಗಳೊಂದಿಗೆ ಸೇರಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾಗಿ ತಿಳಿಸಿದ್ದು, ಆತನ ಬಳಿಯಿದ್ದ ಹಲವಾರು ಮೊಬೈಲ್‌ಗಳ ಬಗ್ಗೆ ವಿಚಾರಿಸಿದಾಗ, ಮೊಬೈಲ್‌ಗಳು ಕಳುವಿಗೆ ಸಂಬಂಧಪಟ್ಟ ಮೊಬೈಲ್ ಫೋನ್‌ಗಳಾಗಿದ್ದು, ಈತನು ಆ 48 ಮೊಬೈಲ್ ಫೋನ್‌ಗಳನ್ನು ಇತರರಿಂದ ಸ್ವೀಕರಿಸಿದ್ದಾಗಿ ತಿಳಿಸಿ ತಪ್ಪೊಪ್ಪಿಕೊಂಡಿದ್ದು, ಆತನಿಂದವಶಪಡಿಸಿಕೊಂಡ 48 ಮೊಬೈಲ್ ಫೋನ್‌ಗಳ ವಾರಸುದಾರರನ್ನು ಪತ್ತೆ ಮಾಡಿ, ಹಿಂತಿರುಗಿಸುವ ಕಾರ್ಯಚಾರಣೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

## ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಪಿಎಸ್ ಅಳವಡಿಕೆ ಹಾಗೂ ಸ್ಕ್ವಾಡ್ ತಂಡ ರಚನೆ : ಸಚಿವ ಚಲುವರಾಯಸ್ವಾಮಿ



**ಬೆಂಗಳೂರು,ಆ.19–** ರಾಜ್ಯಾದ್ಯಂತ ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಪಿಎಸ್ ಅಳವಡಿಕೆ ಹಾಗೂ ಸ್ಕ್ವಾಡ್ ತಂಡವನ್ನು ಬಿಗಿಗೊಳಿಸಲಾಗುವುದು ಎಂದು ಕೃಷಿ ಸಚಿವ ಚಲುವರಾಯ ಸ್ವಾಮಿ ವಿಧಾನಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯೆ ಹೇಮಾಲತ ನಾಯಕ್ ಅವರು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರಿಗೆ ಪ್ರಶ್ನೆ ಕೇಳಿದ್ದರು. ಸಚಿವರ ಪರವಾಗಿ ಉತ್ತರಿಸಿದ ಚಲುವರಾಯಸ್ವಾಮಿಯವರು, ಅಕ್ರಮ ಮರಳುಗಾರಿಕೆ ತಡೆಗಟ್ಟುವುದು ಸರ್ಕಾರದ ಪ್ರಥಮ ಆದ್ಯತೆಯಾಗಿದೆ ಎಂದು ಹೇಳಿದರು.

ಎಲ್ಲೆಲ್ಲಿ ಮರಳುಗಾರಿಕೆ ನಡೆಯುತ್ತದೆಯೋ ಅಂತಹ ಕಡೆ ಜಿಪಿಎಸ್ ಅಳವಡಿಕೆ ಮತ್ತು ಈಗಿರುವ ಸ್ಕ್ವಾಡ್ ತಂಡವನ್ನು ಮತ್ತಷ್ಟು ಬಲಪಡಿಸಲಾಗುವುದು. ಕಟ್ಟುನಿಟ್ಟಿನ ಕ್ರಮದ ನಡುವೆಯೂ ಕೆಲವು ಕಡೆ ಇಂತಹ ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತವೆ ಎಂದರು.

ಅಕ್ರಮ ಮರಳುಗಾರಿಕೆ ನಡೆಸುವವರ ಮೇಲೆ ದಿಢೀರ್ ದಾಳಿ ನಡೆಸಿದ ವೇಳೆ ಲಾರಿ, ಟ್ರ್ಯಾಕ್ಟರ್, ಎತ್ತಿನಗಾಡಿ ಮತ್ತಿತರ ವಾಹನಗಳನ್ನು ಬಿಟ್ಟು ಓಡಿಹೋಗುತ್ತಾರೆ. ಆದರೂ ಸಂಬಂಧಪಟ್ಟವರ ಮೇಲೆ ದೂರು ದಾಖಲಿಸಿ ಕಾನೂನು ಪ್ರಕಾರವೇ ಕ್ರಮ ಜರುಗಿಸುತ್ತೇವೆ ಎಂದು ಹೇಳಿದರು. ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಲ್ಲಾಧಿಕಾರಿಗಳು, ತಹಸೀಲ್ದಾರ್ ಸೇರಿದಂತೆ ಮತ್ತಿತರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ರಾಜ್ಯ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗದಂತೆ ಬಿಗಿಯಾದ ಕಾನೂನು ಕ್ರಮಗಳನ್ನು ತೆಗೆದುಕೊಂಡಿದ್ದೇವೆ.

ಸರ್ಕಾರಕ್ಕೆ ಬರಬೇಕಾದ ರಾಜಸ್ವವನ್ನು ಸಂಗ್ರಹಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ. ಎಲ್ಲಾದರೂ ನಿರ್ದಿಷ್ಟ ಪ್ರಕರಣಗಳಿದ್ದರೆ ಸರ್ಕಾರ ಕಾನೂನು ಕ್ರಮ ತೆಗೆದುಕೊಳ್ಳಲಿದೆ ಎಂದು ಚಲುವರಾಯಸ್ವಾಮಿ ಆಶ್ವಾಸನೆ ನೀಡಿದರು.

## ಕಟ್ಟಡದ ಸ್ವಾಧೀನ ಪತ್ರ ಇಲ್ಲದಿದ್ದರೆ ವಿದ್ಯುತ್ ಸಂಪರ್ಕ ಇಲ್ಲ : ಸಚಿವ ಕೆ.ಜೆ.ಜಾರ್ಜ್

**ಬೆಂಗಳೂರು,ಆ.19–** ಕಟ್ಟಡದ ಸ್ವಾಧೀನ ಪತ್ರ ಇಲ್ಲದಿದ್ದರೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಕಾಶವಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನಸಭೆಗೆ ತಿಳಿಸಿದರು.ಶಾಸನ ಕಲಾಪದಲ್ಲಿ ಬಿಜೆಪಿ ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾಡಿದ ಆಕ್ಷೇಪಕ್ಕೆ ಮಧ್ಯಪ್ರವೇಶಿಸಿ ಮಾತನಾಡಿದ ಸಚಿವರು, ಸ್ವಾಧೀನಪತ್ರವಿಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಬಾರದು ಎಂದು ಸುಪ್ರಿಂಕೋರ್ಟ್ ಆದೇಶವಿದೆ. ಅಲ್ಲದೆ ಕಳೆದ ಮಾ.13 ರಂದು ಈ ಸಂಬಂಧ ಕೆಇಆರ್‌ಸಿ ಆದೇಶವಿದೆ. ಕಾಯ್ದೆಗೆ ತಿದ್ದುಪಡಿಯಾಗದ ಹೊರತು ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದಿಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ವಿದ್ಯುತ್ ಸಂಪರ್ಕಕ್ಕಾಗಿ 4 ಲಕ್ಷ ಕಟ್ಟಡ ಮಂದಿ ಅರ್ಜಿ ಸಲ್ಲಿಸಿದ್ದಾರೆ. ಸ್ವಾಧೀನಪತ್ರ ಹಾಗೂ ಕಟ್ಟಡ ಮುಕ್ತಾಯದ ಪ್ರಮಾಣ ಪತ್ರವಿಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಬಹುದೆಂಬ ಸುಪ್ರಿ?ಂಕೋರ್ಟ್‌ನ ಆದೇಶವಿದ್ದರೆ ನೀಡಲಿ. ಇಂದೇ ಸರ್ಕಾರ ಆದೇಶ ಹೊರಡಿಸಿ ಪ್ರತಿಯೊಬ್ಬರಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ಎಂದರು.

ಈ ಸಂಬಂಧ ವಿಸ್ತೃತವಾಗಿ ಮಾಹಿತಿ ನೀಡುವ ಭರವಸೆ ನೀಡಿದ ಅವರು, 4 ಲಕ್ಷ ಅರ್ಜಿದಾರರಲ್ಲಿ ಸುಪ್ರಿಂಕೋರ್ಟ್ ಆದೇಶಕ್ಕೂ ಮುನ್ನ ಹಣ ಪಾವತಿಸಿದವರು ಇದ್ದಾರೆ. ಗಮನ ಸೆಳೆಯುವ ಸೂಚನೆ ವಿಚಾರದಲ್ಲಿ ಈ ಬಗ್ಗೆ ಸಮಗ್ರ ಉತ್ತರ ನೀಡುವುದಾಗಿ ಭರವಸೆ ನೀಡಿದರು. ಇದಕ್ಕೂ ಮುನ್ನ ಮಾತನಾಡಿದ ಅಶ್ವತ್ಥನಾರಾಯಣ, ಕೆಇಆರ್‌ಸಿ ಆದೇಶವಿಲ್ಲದಿದ್ದರೂ ವಿದ್ಯುತ್



ಸಂಪರ್ಕ ಕೊಡುತ್ತಿಲ್ಲ. ಅಕ್ರಮ–ಸಕ್ರಮ ನಿಯಮಕ್ಕೆ ಸಂಬಂಧಿಸಿದ ಸುಪ್ರಿಂಕೋರ್ಟ್‌ನ ಮಧ್ಯಂತರ ಆದೇಶದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಬಹುದು ಎಂದು ಹೇಳಿದೆ. ಶೇ.15 ರಷ್ಟು ವಿನಾಯಿತಿ ಕೊಟ್ಟರೆ ಉಪಯೋಗವಿಲ್ಲ. ಕೊಡುವುದಾದರೆ ಕೆಲವರಿಗೆ ಮಾತ್ರ ಏಕೆ ಕೊಡಬೇಕು. ಎಲ್ಲರಿಗೂ ವಿನಾಯಿತಿ ಕೊಡಿ. ದಂಡವಿಲ್ಲದೆ ವಿನಾಯಿತಿ ನೀಡಿ. 1 ಲಕ್ಷ ರೂ. ಕೋಟಿ ಸಂಗ್ರಹಿಸುವ ಉದ್ದೇಶವಿದೆ ಎಂದು ಆರೋಪಿಸಿದರು.

ಬಿಜೆಪಿಯ ಹಲವು ಶಾಸಕರು ಮಾತನಾಡಿ, ಸಾಲಸೋಲ ಮಾಡಿ ಮನೆ ಕಟ್ಟಿ ವಿದ್ಯುತ್ ಸಂಪರ್ಕಕ್ಕಾಗಿ ಕಾಯುತ್ತಿದ್ದಾರೆ. ಅವರಿಗೊಂದು ಪರಿಹಾರ ಒದಗಿಸಿ ಎಂದು ಆಗ್ರಹಿಸಿದರು. ಈ ವಿಚಾರದಲ್ಲಿ ಬಿಜೆಪಿ ಮತ್ತು ಆಡಳಿತ ಪಕ್ಷದ ಶಾಸಕರ ನಡುವೆ ವಾಗ್ವಾದ ನಡೆಯಿತು.

## ಮಣ್ಣಿನ ಗಣಪನ ಪೂಜಿಸಲು ಪರಿಸರ ಸಚಿವ ಈಶ್ವರ ಖಂಡ್ರೆ ಮನವಿ

**ಬೀದರ, ಅ. 19–**ಭಾದ್ರಪದ ಶುಕ್ಲ ಚತುರ್ಥಿಯಂದು ಮನೆ ಮನೆಯಲ್ಲೂ ಪೂಜೆಗೊಳ್ಳುವ ಗಣೇಶ ಪರಿಸರ (ಮಣ್ಣಿನಿಂದ) ದಿಂದಲೇ ಹುಟ್ಟಿದ ದೇವರಾಗಿದ್ದು, ಪರಿಸರ ಸ್ನೇಹಿಯಾದ ಬಣ್ಣರಹಿತ ಮಣ್ಣಿನ ಮೂರ್ತಿಗಳನ್ನೇ ಪೂಜಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ ಖಂಡ್ರೆ ನಾಡಿನ ಜನತೆಗೆ ಮನವಿ ಮಾಡಿದ್ದಾರೆ.

ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಚಿನ್ನದಿಂದ, ಬೆಳ್ಳಿಯಿಂದ ಅಥವಾ ಮಣ್ಣಿನಿಂದ ಮಾಡಿದ ಮೂರ್ತಿಗಳನ್ನು ಪೂಜಿಸುವುದು ಅನೂಚಾನವಾಗಿ ನಡೆದುಬಂದಿರುವ ಸಂಪ್ರದಾಯ. ಆದರೆ ಇತ್ತೀಚಿನ ವರ್ಷಗಳಲ್ಲಿ ನೀರಲ್ಲಿ ಕರಗದ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ವಿಷಕಾರಿಯಾದ ಭಾರಲೋಹಯುಕ್ತ ರಾಸಾಯನಿಕ ಬಣ್ಣ ಲೇಪಿತ –ಪಿಓಪಿ ಮೂರ್ತಿಗಳ ಸಂಖ್ಯೆ ಹೆಚ್ಚಾಗಿದ್ದು, ಇದರ ವಿಸರ್ಜನೆಯಿಂದ ಜಲಚರಗಳು, ಪಶುಪಕ್ಷಿಗಳ ಸಾವಿಗೆ ಕಾರಣವಾಗುತ್ತಿದೆ ಎಂದೂ ತಿಳಿಸಿದ್ದಾರೆ.

ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ)ಕಾಯಿದೆ 1974ರ ಕಲಂ 33(ಎ) ಅಡಿಯಲ್ಲಿ ರಾಜ್ಯದ ನದಿ, ಸರೋವರ, ಕೆರೆ, ಕಟ್ಟೆ, ಬಾವಿ ಸೇರಿದಂತೆ ಯಾವುದೇ ಜಲ ಮೂಲದಲ್ಲಿ ಪಿಓಪಿ ಮೂರ್ತಿಗಳ ವಿಸರ್ಜನೆ ನಿಷೆಧಿಸಲಾಗಿದೆ. ಪ್ರಜ್ಞಾವಂತ, ಜವಾಬ್ದಾರಿಯುತ ನಾಗರಿಕರು, ಧಾರ್ಮಿಕರು ಪರಿಸರ ಸ್ನೇಹಿ ಮಣ್ಣಿನ ಗಣಪತಿ ಮೂರ್ತಿಗಳನ್ನು ಮಾತ್ರವೇ ಪೂಜಿಸಿ ಪರಿಸರ ಉಳಿಸುವಂತೆ ಈಶ್ವರ ಖಂಡ್ರೆ ಮನವಿ ಮಾಡಿದ್ದಾರೆ.

ಹೈಕೋರ್ಟ್ ಆದೇಶ: ಪಿಓಪಿ ಗಣೇಶ ವಿಗ್ರಹಗಳನ್ನು ಕ್ಯಾಲ್ಷಿಯಂ, ಸಲ್ಫೇಟ್, ಹೆಮಿಹೈಡ್ರೇಟ್ ಯುಕ್ತ ಪುಡಿಯಿಂದ ತಯಾರಿಸಲಾಗುತ್ತದೆ. ಇದರಲ್ಲಿ ಗಂಧಕ, ರಂಜಕ, ಜಿಪ್ಸಮ್ ಮತ್ತು ಮ್ಯಾಗ್ನೀಷಿಯಂ ಸೇರಿದಂತೆ ಅನೇಕ ಅಪಾಯಕಾರಿ ಅಂಶಗಳಿರುತ್ತವೆ. ಇಂತಹ ಮೂರ್ತಿಗಳಿಗೆ ಪಾದರಸ,



ಕ್ಯಾಡ್ಮಿಯಂ, ಸೀಸ ಮತ್ತು ಇಂಗಾಲ ಒಳಗೊಂಡ ರಾಸಾಯನಿಕ ಬಣ್ಣ ಲೇಪಿಸಲಾಗುತ್ತದೆ. ಇದನ್ನು ಕೆರೆ, ಬಾವಿ, ನದಿಯಲ್ಲಿ ವಿಸರ್ಜಿಸಿದಾಗ ಭಾರ ಲೋಹ ಕರಗಿ ಜನ ಜಾನುವಾರುಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಜಲಚರಗಳ ಸಾವಿಗೆ ಕಾರಣವಾಗುತ್ತದೆ ಎಂದು ತಿಳಿಸಿದ್ದಾರೆ.

ಹಬ್ಬದ ಸಂಭ್ರಮದಲ್ಲಿ ಯಾವುದೇ ಸಮುದಾಯದ ಧಾರ್ಮಿಕ ಭಾವನೆಗಳಿಗೆ ನೋವು ಉಂಟು ಮಾಡುವ ಉದ್ದೇಶ ಸರ್ಕಾರಕ್ಕೆ ಇಲ್ಲ. ಆದರೆ ಪರಿಸರಕ್ಕೆ ಮಾರಕವಾದ ಪಿಓಪಿ ಮೂರ್ತಿಗಳ ತಯಾರಿಕೆ, ಸಾಗಾಟ, ಮಾರಾಟ ಮತ್ತು ವಿಸರ್ಜನೆ ನಿಷೆಧಿಸಿ 2023ರ ಸೆ.15ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ, ಇತ್ತೀಚೆಗೆ ರಾಜ್ಯ ಹೈಕೋರ್ಟ್ ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಪರಿಸರ ಸ್ನೇಹಿಯಾದ ಮಣ್ಣಿನ ಮೂರ್ತಿಗಳನ್ನು ಪೂಜಿಸಿ ಪರಿಸರ ಉಳಿಸುವಂತೆ ಕೋರಿದ್ದಾರೆ.

## ವಿಷ್ಣು ಸ್ಮಾರಕ ನಿರ್ಮಾಣಕ್ಕೆ ಜಾಗ ಖರೀದಿಸಿದ ಕಿಚ್ಚ ಸುದೀಪ್

**ಬೆಂಗಳೂರು, ಆ.19–** ನಟ ಕಿಚ್ಚ ಸುದೀಪ್ ಅವರು ಡಾ. ವಿಷ್ಣುವರ್ಧನ್ ಸ್ಮಾರಕ ನಿರ್ಮಾಣಕ್ಕಾಗಿ ಕೆಂಗೇರಿ ಬಳಿ ಅರ್ಧ ಎಕರೆ ಭೂಮಿ ಯನ್ನು ಖರೀದಿಸಿದ್ದಾರೆ. ಈ ಜಾಗದಲ್ಲಿ ವಿಷ್ಣುವರ್ಧನ್ ದರ್ಶನ ಕೇಂದ್ರ ಸ್ಥಾಪಿಸಿ, 25 ಅಡಿ ಉದ್ದದ ಪ್ರತಿಮೆಯನ್ನು ಅಲ್ಲಿ ಸ್ಥಾಪಿಸಲು ಯೋಜಿಸಲಾಗಿದೆ.

ಈ ಸಂಬಂಧ ನಿನ್ನೆ ಸಂಜೆ ಪತ್ರಿಕಾಗೋಷ್ಠಿ ಏರ್ಪಡಿಸಿದ ವೀರಕಪುತ್ರ ಶ್ರೀನಿವಾಸ್ ಮಹತ್ತರ ಸಂಗತಿಯನ್ನು ಬಿಚ್ಚಿಟ್ಟಿದ್ದಾರೆ. ಸುದೀಪ್ ಅವರ ಜನ್ಮದಿನವಾದ ಸೆಪ್ಟಂಬರ್.2ರಂದು ಪೂರ್ಣ ಮಾಹಿತಿಯನ್ನು ನೀಡಲಾಗುವುದೆಂದು ವೀರಕಪುತ್ರ ಶ್ರೀನಿವಾಸ್ ತಿಳಿಸಿದರು.ಅಭಿಮಾನ್ ಸ್ಟುಡಿಯೋದಲ್ಲಿ ಇದ್ದ ಪುಣ್ಯಭೂಮಿಯಲ್ಲಿ ನಮಗೆ ದರ್ಶನಕ್ಕೆ ಜಾಗ, ಅವಕಾಶ ಇಲ್ಲ. ಸೆಪ್ಟಂಬರ್ 18ರಂದು ನಾವೆಲ್ಲರೂ ಯಜಮಾನರನ್ನು ಬೆಂಗಳೂರಿನಲ್ಲಿ ಎಲ್ಲಿ ಹೋಗಿ ನೋಡಬೇಕು ಎಂದರೆ ಉತ್ತರ ಇಲ್ಲ. ಹಾಗಾಗಿ ಈ ವಿಷಯಕ್ಕೆ ನಾವು ಆದಷ್ಟು ಬೇಗ ತಾರ್ಕಿಕ ಅಂತ್ಯ ಕಾಣಬೇಕು ಎಂಬ ನಿರ್ಧಾರಕ್ಕೆ ಬಂದಿದ್ದೇವೆ. ಆ ನಿಟ್ಟಿನಲ್ಲಿ ನಾವು ಕೆಲಸ ಕೂಡ ಮಾಡುತ್ತಿದ್ದೇವೆ ಎಂದು ಹೇಳಿದರು.

'ವಿಷ್ಣುವರ್ಧನ್ ಅವರ ಪುಣ್ಯಭೂಮಿಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಇಡೀ ಅಭಿಮಾನ್ ಸ್ಟುಡಿಯೋದ ಜಾಗವನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಬೇಕು. ಆ ಜಾಗವನ್ನು ಮುಟ್ಟುಗೋಲು ಹಾಕಿಕೊಂಡು ಅದರ ಮೂಲ ಉದ್ದೇಶವಾದ ಸ್ಟುಡಿಯೋ ಉಳಿಸಿಕೊಳ್ಳಲು ಸರ್ಕಾರವನ್ನು ಒತ್ತಾಯಿಸಿ ನಾವು ಹೋರಾಟ ಮಾಡುತ್ತೇವೆ' ಎಂದರು.

ಈ ದರ್ಶನ ಕೇಂದ್ರ ದ ಅಡಿಗಲ್ಲು ಪೂಜೆ ಸೆಪ್ಟಂಬರ್ 18ರಂದು ವಿಷ್ಣುವರ್ಧನ್ ಅವರ ಜನ್ಮದ ದಿನ ನೆರವೇರುವ ಸಾಧ್ಯತೆ ಇದೆ. ವಿಷ್ಣುವರ್ಧನ್ ಅವರ ಜನ್ಮ ದಿನದ ಅಮೃತ ಮಹೋತ್ಸವದ



ಸಮಾರಂಭ ಕೂಡ ಅದ್ದೂರಿ ಯಾಗಿ ಬೆಂಗಳೂರಿನ ನಂದಿ ಲಿಂಕ್ಸ್ ನಲ್ಲಿ ನಡೆಯಲಿದ್ದು ಬಹುಶಃ ವಿಷ್ಣುವರ್ಧನ್ ದರ್ಶನ ಕೇಂದ್ರ ನಿರ್ಮಾಣವಾಗುತ್ತಿರುವುದರಿಂದ, ಇತ್ತೀಚೆಗೆ ಬೇಸರಗೊಂಡಿದ್ದ ಅಭಿಮಾನಿಗಳಿಗೆ ಸಮಾಧಾನ ತಂದಿದೆ.

ಕೆಂಗೇರಿ ಬಳಿ ಇರುವ ಅಭಿಮಾನಿ ಸ್ಟುಡಿಯೋ ದಲ್ಲಿ ವಿಷ್ಣುವರ್ಧನ್ ಅವರ ಸಮಾಧಿಯನ್ನು ಕೆಡವಿದ ನಂತರ ಕಿಚ್ಚ ಸುದೀಪ್ ಬೇಸರಗೊಂಡಿದ್ದರು.ಸ್ಮಾರಕ ಮರು ನಿರ್ಮಾಣಕ್ಕೆ ಹಣ ಕಾಸು ಅಥವಾ ಇನ್ನೇನಾದ್ರೂ ಸಹಾಯ ಬೇಕಾ? ಎಲ್ಲದಕ್ಕೂ ನಾನು ಸಿದ್ಧನಿದ್ದೇನೆ ಇನ್ನು ಭಿಕ್ಷೆ ಬೇಡಿದ್ದು ಸಾಕು ಅಭಿಮಾನಿಗಳಾದ ನಾವೇ ಕಾರ್ಯಪ್ರವರ್ತರಾಗಬೇಕು ಎಂದು ತಿಳಿಸಿದ್ದರು .ತಾವು ವಿಷ್ಣು ಸೇನಾ ಸಮಿತಿ ಅಧ್ಯಕ್ಷ ವೀರಕ ಪುತ್ರ ಶ್ರೀನಿವಾಸ್ ನೇತೃತ್ವದಲ್ಲಿ ನಿರ್ಮಿಸಲು ಹೊರಟಿರುವ ವಿಷ್ಣುವರ್ಧನ್ ಪ್ರತಿಮೆಯ ಕೆಲಸಕ್ಕೆ ಕೈ ಜೋಡಿಸುವುದಾಗಿ ತಿಳಿಸಿದ್ದರು.

## ಎಳಗ್ರಿ(ಡಿ) ಕೇಂದ್ರೀಯ ವಿದ್ಯಾಲಯದಿಂದ 1 ರಿಂದ 5ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಆ.19–** ಜಿಲ್ಲೆಯ ಸಿಂಧನೂರಿನ ಎಳಗ್ರಿ(ಡಿ) ಕೇಂದ್ರೀಯ ವಿದ್ಯಾಲಯದಲ್ಲಿ 2025–26ನೇ ಸಾಲಿನಲ್ಲಿ 1 ರಿಂದ 5ನೇ ತರಗತಿಯ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅಭ್ಯರ್ಥಿಗಳು ನೋಂದಣಿಯನ್ನು ಆಗಸ್ಟ್ 29ರ ಮಧ್ಯಾಹ್ನ 3 ಗಂಟೆಯೊಳಗಾಗಿ ಮಾಡಿಕೊಳ್ಳಬಹುದಾಗಿದೆ. ತಾತ್ಕಾಲಿಕ ಪ್ರವೇಶ ಪಟ್ಟಿಗಳ ಪ್ರದರ್ಶನವನ್ನು ಸೆಪ್ಟೆಂಬರ್ 4ರಂದು ಮಾಡಲಾಗುವುದು. ಎಲ್ಲಾ ತರಗತಿಗಳ ಪ್ರವೇಶ ಪ್ರಕ್ರಿಯೆವು ಸೆಪ್ಟೆಂಬರ್ 5ರಿಂದ 12ರವರೆಗೆ ಹಮ್ಮಿಕೊಳ್ಳಲಾಗಿದೆ. ಸೆಪ್ಟೆಂಬರ್ 15ರಿಂದ ತರಗತಿಗಳು ಪ್ರಾರಂಭವಾಗಲಿದ್ದು, ಎಲ್ಲಾ ಅರ್ಹ ಪೋಷಕರು ನೋಂದಣಿ ನಮೂನೆಯನ್ನು ಕಚೇರಿಯಿಂದ ಪಡೆದು ಅಗತ್ಯವಿರುವ ಎಲ್ಲಾ ದಾಖಲೆಗಳೊಂದಿಗೆ ಕೇಂದ್ರೀಯ ವಿದ್ಯಾಲಯ ಎಲಗ್ರಿ(ಡಿ), ಕುಷ್ಟಗಿ ರಸ್ತೆ, ಸಿಂಧನೂರು, ರಾಯಚೂರು ಕರ್ನಾಟಕ ಪಿನ್ –584128 ಇಲ್ಲಿ ಕೊನೆಗೆ ಸಲ್ಲಿಸಬಹುದಾಗಿದೆ.

ಪ್ರವೇಶವನ್ನು ಕೆವಿಎಸ್ ಪ್ರವೇಶ ಮಾರ್ಗಸೂಚಿಗಳು–2025–26ರ ಪ್ರಕಾರ ಕಟ್ಟುನಿಟ್ಟಾಗಿ ಮಾಡಲಾಗುತ್ತದೆ. ಹೆಚ್ಚಿನ ವಿವರಗಳಿಗಾಗಿ ಪೋಷಕರು ಭೇಟಿ ವೆಬ್‌ಸೈಟ್ ವಿಳಾಸ: www.kvsangathan.nic.in ಕ್ಕೆ ಭೇಟಿ ನೀಡಬಹುದಾಗಿದೆ ಎಂದು ಎಳಗ್ರಿ(ಡಿ) ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಗ್ಯಲಕ್ಷ್ಮಿ ಪರಿಪಕ್ವ ಮೊತ್ತ ಪಾವತಿಗಾಗಿ ಅರ್ಜಿ ಆಹ್ವಾನ

**ರಾಯಚೂರು,ಆ.19–** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2006–07ನೇ ಸಾಲಿನಿಂದ ಭಾಗ್ಯಲಕ್ಷ್ಮಿ

ಯೋಜನೆಯನ್ನು ಜಾರಿ ಬಂದಿದ್ದು, ಈ ಯೋಜನೆಯಡಿ ಭಾಗ್ಯಲಕ್ಷ್ಮಿ ಬಾಂಡ್ ಅಥವಾ ಸೌಲಭ್ಯವನ್ನು ಪಡೆದಿರುವ ಫಲಾನುಭವಿಗಳಿಗೆ 2024–25ನೇ ಸಾಲಿನಿಂದ 18 ವರ್ಷ ಪೂರ್ಣಗೊಂಡ ನಂತರ ಭಾಗ್ಯಲಕ್ಷ್ಮಿ ಪರಿಪಕ್ವ ಮೊತ್ತವನ್ನು ಪಾವತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ 2006–07, 2007–08ನೇ ಸಾಲಿನಲ್ಲಿ ಭಾಗ್ಯಲಕ್ಷ್ಮಿ ಸೌಲಭ್ಯವನ್ನು ಪಡೆದಿರುವ ಫಲಾನುಭವಿಗಳು 18 ವರ್ಷ ಪೂರ್ಣಗೊಂಡಿದ್ದು, ಈ ಫಲಾನುಭವಿಗಳು ಹತ್ತಿರ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ನಿಗಧಿತ ನಮೂನೆಗಳನ್ನು ಪಡೆದು ಪರಿಪಕ್ವ ಮೊತ್ತ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಗನವಾಡಿ ಕೇಂದ್ರಗಳಿಗೆ ಅಥವಾ ಶಿಶು ಅಭಿವೃದ್ಧಿ ಯೋಜನೆನಾಧಿಕಾರಿಗಳಿಂದ ಮಾಹಿತಿ ಪಡೆಯಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿವಿಧ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ

**ರಾಯಚೂರು,ಆ.19–** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್, ಗ್ರೂಪ್–ಸಿ, ಆರ್.ಆರ್.ಬಿ ಮತ್ತು ಎಸ್.ಎಸ್.ಸಿ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ವೆಬ್‌ಸೈಟ್ ವಿಳಾಸ: https://sevasindhu.karnataka.gov.in ನಲ್ಲಿ ಆಗಸ್ಟ್ 26ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಂಡೆಗುಡ್ಡ ಆಶ್ರಮ ಶಾಲೆ ಮಕ್ಕಳಿಗೆ ಲೇಖನ ಸಾಮಗ್ರಿ ವಿತರಣೆ



**ಅರಕೇರಾ,ಆ.19–**ತಾಲೂಕಿನ ಮಲ್ಲೇದೇವರಗುಡ್ಡ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿಬರುವ ಬಂಡೆಗುಡ್ಡ ಗ್ರಾಮದಲ್ಲಿ ಆಶ್ರಮ ವಸತಿ ಶಾಲೆ ಶಾಲೆಯ ಮಕ್ಕಳಿಗೆ ಮತ್ತು ಹನುಮನಾಯ್ಕತಾಂಡದ ಸರಕಾರಿ ಶಾಲಾ ಮಕ್ಕಳಿಗೆ ಕನ್ನಡ ಸೇನೆ ಕರ್ನಾಟಕ ಅರಕೇರಾ ತಾಲೂಕ ವತಿಯಿಂದ ನೋಟು ಬುಕ್ ,ಪೆನ್ನು, ಅಂಕಲಿಪಿ,ವಿತರಣೆಮಾಡಲಾಯಿತು.

ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ಅರಕೇರಾ ತಾಲೂಕ ಅಧ್ಯಕ್ಷರಾದ ಮೈಹಿಬೂಬ ಬಡಿಗೇರಾ ಜಿಲ್ಲಾ ಉಪಾಧ್ಯಕ್ಷರಾದ ಗೋವಿಂದ ಚವ್ಹಾಣ, ಕಾರ್ಯಧ್ಯಕ್ಷರಾದ ಹನುಮೇಶಮೇಟಿ, ತಾಲೂಕ ಉಪಾಧ್ಯಕ್ಷರಾದ ನಿತ್ಯಾನಂದನಾಯಕ ಪ್ರಧಾನಕಾರ್ಯದರ್ಶಿ ಜಿ.ಹನುಮಂತ್ರಾಯನಾಯಕ,ರವಿ ಚವ್ಹಾಣ, ಮಾರುತಿನಾಯಕ,ಬಸವಪೂಜಾರಿ, ಪವನ್,ಸುರೇಶ, ಬೂದೆಪ್ಪ, ಶ್ರೀನಿವಾಸ,ಸಾಗರ,ರಮೇಶ, ಇತರರಿದ್ದರು.

# ಆಗಸ್ಟ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

**ಯುವ ಮಾರ್ಗ ಸುದ್ದಿ**



**ರಾಯಚೂರು,ಆ.19–** ಇಲ್ಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಆಗಸ್ಟ್ ಮಾಹೆಗೆ ಪಡಿತರ ಧ್ಯಾನಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ(ಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯ ಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗ ಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗ ಡಿಕಾರರು ಕಡಿಮೆ ಪ್ರಮಾಣದ ಪಡಿ ತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಡಿ.ದೇವರಾಜ ಅರಸು ಜಯಂತಿ: ವಿವಿಧ ಸಮಾಜದ ಮುಖಂಡರು ಭಾಗಿಯಾಗಲು ಮನವಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.19–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಗಸ್ಟ್ 20ರ ಬೆಳಿಗ್ಗೆ 10. 30ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶ್ರೀ ಡಿ.ದೇವರಾಜ ಅರಸು ಅವರ ಜಯಂತಿ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಭಾಗಿಯಾಗಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಬೆಳಿಗ್ಗೆ 8.30ಕ್ಕೆ ನಗರದ ಅಂಬೇಡ್ಕರ್ ವೃತ್ತದಿಂದ ಚಾಲನೆ ನೀಡಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯ ಮಂತ್ರಿಗಳಾದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಅಂಗವಾಗಿ ಅವರ ಭಾವಚಿತ್ರ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು, ವಿವಿಧ ಸಂಘ, ಸಂಸ್ಥೆಯ ಮುಖಂಡರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಕಾಂಗ್ರೆಸ್‌ನಿಂದ ಪ್ರಬಂಧ ಸ್ಪರ್ಧೆ

**ಯುವ ಮಾರ್ಗ ಸುದ್ದಿ**




**ಮಾನ್ವಿ,ಆ.19–** ಪಟ್ಟಣದ ಭಾರತ ಜೋಡೋ ಭವನದಲ್ಲಿ, ಯುವ ಕಾಂಗ್ರೆಸ್ ಸಮಿತಿವತಿಯಿಂದ 78ನೇ ಸ್ವಾತಂತ್ರ್ಯ ದಿನಾಚರಣೆ ಮತ್ತು 65ನೇ ರಾಷ್ಟ್ರೀಯ ಯುವ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮವನ್ನು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಾಪೂರ್ ಸಾಬ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಬ್ದುಲ್ ಗಾಪೂರ್ ಸಾಬ್ ಅವರು, "ವಿದ್ಯಾರ್ಥಿಗಳಲ್ಲಿ ನಮ್ಮ ದೇಶದ ಇತಿಹಾಸ ಮತ್ತು ಸಂವಿಧಾನದ ಮೌಲ್ಯಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಸ್ಪರ್ಧೆಯ ಮುಖ್ಯ ಉದ್ದೇಶವಾಗಿದೆ," ಎಂದು ತಿಳಿಸಿದರು.'ಭಾರತಕ್ಕೆ ಸ್ವಾತಂತ್ರ್ಯ ಮತ್ತು ಸಂವಿಧಾನದ ಮಹತ್ವ' ಎಂಬ ವಿಷಯದ ಕುರಿತು ನಡೆದ ಈ ಪ್ರಬಂಧ ಸ್ಪರ್ಧೆಯಲ್ಲಿ ತಾಲೂಕಿನ ವಿವಿಧ ಕಾಲೇಜುಗಳ 400ಕ್ಕೂ ಹೆಚ್ಚು ವಿದ್ಯಾರ್ಥಿ ಗಳು ಭಾಗವಹಿಸಿದ್ದರು.

ಇದೆ ವೇಳೆ ಪ್ರಥಮ ಸ್ಥಾನ ಪಡೆದ ಸರ್ಕಾರಿ ಬಾಷುಮಿಯಾ ಕಾಲೇಜಿನ ವಿದ್ಯಾರ್ಥಿನಿ ಶ್ವೇತಾ. ಇವರಿಗೆ 15,000 ರೂಪಾಯಿ ಬಹುಮಾನದ ಚೆಕ್ ಮತ್ತು ಪುರಸ್ಕಾರ ನೀಡಲಾಯಿತು.ದ್ವಿತೀಯ ಸ್ಥಾನ ಪಡೆದ ಅಂಜುಮ ಫಾತಿಮಾ ಇವರಿಗೆ 10,000 ರೂಪಾಯಿ ಬಹು ಮಾನದ ಚೆಕ್,ತೃತೀಯ ಸ್ಥಾನ ಪಡೆದ ಭೀಮಮ್ಮ ಇವರಿಗೆ 5,000 ರೂಪಾಯಿ ಬಹುಮಾ ನದ ಚೆಕ್ ನೀಡಲಾಯಿತು.

ಇದಲ್ಲದೆ, ಉತ್ತಮವಾಗಿ ಪ್ರಬಂಧ ಬರೆದ ಶ್ಯಾಮಸುಂದರ ದೇಸಾಯಿ, ರಕ್ಷಿತಾ, ಅಲಿ ನಾಹಿಖ್ರಾ, ಸುಪ್ರಿತಾ, ಮತ್ತು ಮೈತ್ರಿ ಅವರಿಗೆ ಸಮಾಧಾನಕರ ಬಹುಮಾನಗಳನ್ನು ನೀಡಲಾಯಿತು.ಈ ಕಾರ್ಯಕ್ರಮದಲ್ಲಿ ಪುರಸಭೆ ಹಿರಿಯ ಸದಸ್ಯ ರಾದ ಲಕ್ಷ್ಮಿದೇವಿ ನಾಯಕ, ಶಿವರಾಜ ವಕೀಲರು, ರಾಜಾ ಸುಭಾಷ ಚಂದ್ರ ನಾಯಕ, ಸೈಯದ್ ಖಾಲಿದ್ ಗುರು, ಯುತ್ ಕಾಂಗ್ರೆಸ್ ಬ್ಲಾಕ್ ಸಮಿತಿ ಅಧ್ಯಕ್ಷರಾದ ಬಿ.ಪ್ರೀತಮ್ ಕೊಡ್ಲಿ, ಮಾನ್ವಿ ಯುವ ಕಾಂಗ್ರೆಸ್ ಅಧ್ಯಕ್ಷರಾದ ಪ್ರವೀಣ್ ಕುಮಾರ, ಮತ್ತು ಇತರ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಪಟ್ಟಣದ ಮುಖ್ಯರಸ್ತೆ ದುರಸ್ತಿಗೊಳಿಸಿ : ಮರಲಿಂಗ ಪಾಟೀಲ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಆ.19–** ಪಟ್ಟಣದ ಮಿನಿ ವಿಧಾನಸೌಧ,ಗಾಂಧಿ ವೃತ್ತ, ಜೈರುದ್ದೀನ್ ಪಾಷಾ ಸರ್ಕಲ್ ಅಂಬೇಡ್ಕರ್ ವೃತ್ತದವರೆಗೆ ಕೂಡಲೇ ರಸ್ತೆ ದುರಸ್ತಿಗೊಳಿಸಿ ಸುಗಮ ಸಂಚಾರಕ್ಕೆ ಅನು ಮಾಡಿಕೊಡಬೇಕು ಎಂದು ರಾಜ್ಯ ರೈತ ಸಂಘ ಹಸಿರು ಸೇನೆ ಕೋಡಿಹಳ್ಳಿ ಚಂದ್ರಶೇಖರ ಬಣ ತಾಲೂಕ ಸಮಿತಿ ಅಧ್ಯಕ್ಷ ಮರಲಿಂಗ ಪಾಟೀಲ ಗೌರಂಪೇಟ ಒತ್ತಾಯಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಂಗಳ ವಾರ ಮಾತನಾಡಿದರು.ಪಟ್ಟಣದ ಪ್ರಮುಖ ರಸ್ತೆಯಲ್ಲಿ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ಸಂಚರಿಸಲು ರಸ್ತೆ ಯೋಗ್ಯವಾಗಿಲ್ಲ, ಮಿನಿವಿಧಾನಸೌಧ ಮುಂದೆಗಡೆ ಇರುವ ರಸ್ತೆಯ ಮೇಲೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಪ್ರತಿನಿತ್ಯ ಸಂಚರಿಸುತ್ತಿದ್ದಾರೆ .ಈ ರಸ್ತೆಯಲ್ಲಿ ಭಾರಿ ಪ್ರಮಾಣದ ಗುಂಡಿಗಳು ಬಿದ್ದಿವೆ. ಇದರಿಂದಾಗಿ ವಾಹನ ಸವಾರರಿಗೆ ಸಂಚಾರ ಸಂಕಷ್ಟ ತಂದಿದೆ. ಕೂಡಲೇ ಅಧಿಕಾರಿಗಳು ಜನಪ್ರತಿನಿಧಿಗಳು ಎಚ್ಚೆತ್ತುಕೊಂಡು ರಸ್ತೆ ದುರಸ್ತಿಗೊಳಿಸಬೇಕು. ಶನಿವಾರ ವಾರದ ಸಂತೆ ಮಿನಿ ವಿಧಾನಸೌಧದ ರಸ್ತೆ ಮೇಲೆ ಮಾಡಲಾಗುತ್ತಿದೆ. ಇದರಿಂದ ಸಂಚಾರಕ್ಕೆ ತೀವ್ರ ಅಡಚಣೆಯಾಗುತ್ತಿದ್ದು, ವಾರದ ಸಂತೆ ಬೇರೆ ಕಡೆಗೆ ಸ್ಥಳಾಂತರ ಮಾಡಬೇಕು.ಜೈರುದ್ದೀನ್ ಪಾಷಾ ಸರ್ಕಲ್ ನಿಂದ ಕೊಪ್ಪರು ಕ್ರಾಸ್ ವರೆಗೆ ಬೀದಿ ದೀಪ ಅಳವಡಿಸಬೇಕು. ಪಟ್ಟಣದ ಪ್ರಮುಖ ರಸ್ತೆ ಕಾಮಗಾರಿ ಡಾಂಬರೀಕರಣ ಬೀದಿ ದೀಪಗಳು ಅಳವಡಿಸಬೇಕು. ಇಲ್ಲದೆ ನಿರ್ಲಕ್ಷ ವಹಿಸಿದರೆ ಮುಂದಿನ ದಿನಗಳಲ್ಲಿ ಪುರಸಭೆ ಕಚೇರಿ ಮುಂದುಗಡೆ ಸಂಘ ಟನೆ ವತಿಯಿಂದ ನಿರಂತರ ಉಗ್ರವಾದ ಹೋರಾಟ ಹಮ್ಮಿ ಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ತಿಮ್ಮನಗೌಡ, ರಮೇಶ ನಾಯಕ, ನಾಗರಾಜ ನಾಯಕ, ಬಸವರಾಜ ಹಿರೇಮಠ, ಹನುಮಂತ್ರಾಯು, ರಮೇಶ ಗೌಡ, ಸೇರಿದಂತೆ ಇತರರಿದ್ದರು.

## ಅರಕೇರಾ ತಾಲೂಕು ಬಿಜೆಪಿ ಯುವ ಘಟಕದ ಅಧ್ಯಕ್ಷರಾಗಿ ಕೆ.ಭಗವಂತ್ರಾಯನಾಯಕ ನೇಮಕ



**ಯುವ ಮಾರ್ಗ ಸುದ್ದಿ**

**ಅರಕೇರಾ,ಆ.19–**ಭಾರತೀಯ ಜನತಾ ಪಕ್ಷದ ಅರಕೇರಾ ತಾಲೂಕಿನ ಯುವ ಘಟಕದ ನೂತನ ಅಧ್ಯಕ್ಷರನ್ನಾಗಿ ಕೆ.ಭಗವಂತ್ರಾಯನಾಯಕ ಇವರನ್ನು ನೇಮಕ ಮಾಡಲಾಗಿದೆ.

ಕೂಡಲೇ ಪಕ್ಷ ಸಂಘಟನೆಯಲ್ಲಿ ತೊಡಗಿಕೊಂಡು ಪಕ್ಷದ ಬಲವರ್ಧನೆಗೆ ಶ್ರಮವಹಿಸಿಸುವಂತೆ ತಿಳಿಸಿದ್ದಾರೆ.ಪಕ್ಷದ ಮುಖಂಡರು ನೇಮಕಾತಿ ಮಾಡಿ ಆದೇಶ ನೀಡಿದ್ದಾರೆ.

## ಗಣೇಶ ಹಬ್ಬ: ಚರ್ಮದ ವಸ್ತುಗಳು ರಿಯಾಯಿತಿ ದರದಲ್ಲಿ ಲಭ್ಯ

**ರಾಯಚೂರು,ಆ.19–**ಇಲ್ಲಿನ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದಿಂದ ಗೌರಿ ಗಣೇಶ ಹಬ್ಬದ ಪ್ರಯುಕ್ತ ಎಲ್ಲಾ ರೀತಿಯ ಪಾದರಕ್ಷೆಗಳು ಹಾಗೂ ಚರ್ಮ ವಸ್ತುಗಳಿಗೆ ಶೇ.05 ರಿಂದ ಶೇ.10 ರಿಯಾಯಿತಿ ದರದಲ್ಲಿ ಮಾರಾಟವನ್ನು ರಾಯಚೂರಿನ ಮಾರಾಟ ಮಳಿಗೆ ನಂಬರ್ 02ರ ಮಹಿಳಾ ಸಮಾಜ ಕಾಂಪ್ಲೇಕ್ಸನಲ್ಲಿ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದ್ದು, ಗ್ರಾಹಕರು ಇದರ ಸದಪಯೋಗವನ್ನು ಪಡೆಯಬೇಕೆಂದು ಲಿಡ್‌ಕರ್ ಮಾರಾಟ ಮಳಿಗೆ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಪ ಲೋಕಾಯುಕ್ತ ಬಿ.ವೀರಪ್ಪ ಅವರಿಗೆ ಖುದ್ದು ಭೇಟಿ ಮಾಡಿ ದೂರು ಸಲ್ಲಿಸಲು ಅವಕಾಶ

**ರಾಯಚೂರು,ಆ.19–**ಆಗಸ್ಟ್ 28 ರಿಂದ 30 ರವರೆಗೆ ರಾಯಚೂರ ಜಿಲ್ಲೆಯಲ್ಲಿ ಗೌರವಾನ್ವಿತ ನ್ಯಾಯಮೂರ್ತಿ ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಉಪಸ್ಥಿತರಲಿದ್ದು ಸಾರ್ವಜನಿಕರು ಅವರಿಗೆ ನೇರವಾಗಿ ಭೇಟಿ ಮಾಡಿ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಗಸ್ಟ್ 29ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಜಿಲ್ಲಾ ಶಿಬಿರ ಕೈಗೊಳ್ಳಲಿದ್ದು, ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ.ಜಿಲ್ಲೆಯಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿ ಅಥವಾ ನೌಕರರಿಂದ ತಮಗೆ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದರೆ ಅಥವಾ ಅಧಿಕಾರಿ ಅಥವಾ ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ಯಾವುದೇ ತರಹದ ಭ್ರಷ್ಟಾಚಾರ ಮತ್ತು ದುರಾಡಳಿತದಲ್ಲಿ ತೊಡಗಿ ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಗೌರವಾನ್ವಿತರ ಮುಂದೆ ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ. ಅದೆ ರೀತಿ ಆಗಸ್ಟ್ 30ರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.45 ಗಂಟೆಯೆರವರೆಗೆ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಗೌರವಾನ್ವಿತ ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ತನಿಖೆ ಅಥವಾ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳಲ್ಲಿ ಕಚೇರಿಯಿಂದ ನೋಟಿಸ್ ಕಳುಹಿಸಿರುವ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸಲಿದ್ದಾರೆ. ದೂರುದಾರರು ಮತ್ತು ಎದುರುದಾರರು ನಿಗದಿತ ಸಮಯದಲ್ಲಿ ಹಾಜರಾಗಿ ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ರಾಯಚೂರಿನ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬದ ಶಾಂತಿ ಪಾಲನೆ ಸಭೆ



**ದೇವದುರ್ಗ,ಆ.19–**ಪಿ ಐ ಮಂಜುನಾಥ್ ನೇತೃತ್ವದಲ್ಲಿ ಇಂದು ಮಂಗಳವಾರ ಆಗಸ್ಟ್ 27ರಂದು ಗಣೇಶ್ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಸೆಪ್ಟೆಂಬರ್ 4ರಂದು ನಡೆಯಲಿದೆ. ಅಂದು ಈದ್ ಮಿಲಾದ ನಬಿ ಕೂಡ ಎರಡು ಒಂದೇ ದಿನ ಇರುವುದರಿಂದ ಎರಡು ಸಮುದಾಯದ ಬಾಂಧವರು ಶಾಂತಿ ಕಾಪಾಡುವ ನಿಟ್ಟಿನಲ್ಲಿ ಸಭೆ ಮಾಡಲಾಯಿತು.ಈ ಸಂದರ್ಭದಲ್ಲಿ ಅಮೀನ್ ಬಾಷೆ ಗೌರಂಪೇಟೆ, ಅನ್ವರ್ ಡ್ರೈವರ್, ಇಕ್ಬಾಲ್ ಸಾಬ್,ಹೌ ದೊಡ್ಡಿ, ಮೈನುದ್ದೀನ್ ಡಿಜೆ, ಖಾಜಿ ಜಾಕೀರ. ಸೇರಿದಂತೆ. ಇತರರಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H